# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 | Issue : 66 | MONDAY 18-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ರೈತರು ಎರಡೇಟು ಹೊಡೆದರೂ, ನನ್ನ ಬಟ್ಟೆ ಹರಿದರೂ ಬಿಡದಿ ಟೌನ್‌ಶಿಪ್ ಮಾಡಿಯೇ ಸಿದ್ಧ: ಡಿ.ಕೆ ಶಿವಕುಮಾರ್



**ಬೆಳಗಾವಿ ವಾರ್ತೆ ಬೆಂಗಳೂರು:** ರೈತರು ಎರಡೇಟು ಹೊಡೆದರೂ, ನನ್ನ ಬಟ್ಟೆ ಹರಿದರೂ ಬಿಡದಿ ಟೌನ್‌ಶಿಪ್ ಮಾಡಿಯೇ ಸಿದ್ಧ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಬಿಡದಿ ಟೌನ್‌ಶಿಪ್‌ಗೆ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರ ವಿರೋಧಕ್ಕೆ ಸಂಬಂಧಪಟ್ಟಂತೆ ನಿನ್ನೆ ಮಾಧ್ಯಮ ಪ್ರತಿನಿಧಿಗಳು ಪ್ರಶ್ನೆ ಕೇಳದಾಗ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿ ಅಧಿಕಾರದಲ್ಲಿದ್ದಾಗ ಮಾಡಿದ್ದ ಯೋಜನೆಯನ್ನೆ? ನಾವು ಮುಂದುವರಿಸುತ್ತಿದ್ದೆ?ವೆ. ಅಗತ್ಯವಿಲ್ಲ ಎಂದಾಗಿದ್ದರೆ ಕುಮಾರಸ್ವಾಮಿ ಏಕೆ ಭೂಮಿಯನ್ನು ಡಿನೋಟಿಫೈ ಮಾಡಲಿಲ್ಲ ಎಂದು ಪ್ರಶ್ನಿಸಿದರು.

**ಬಟ್ಟೆ ಹರಿದರೂ ಬಿಡಲ್ಲ:** ಯೋಜನೆಗೆ ಭೂಮಿ ಬಿಟ್ಟುಕೊಡುವಂತೆ ನಾನೇ ಖುದ್ದಾಗಿ ರೈತರ ಮನವೊಲಿಸುತ್ತೆ?ನೆ. ಸಮಯ, ದಿನಾಂಕ ಗೊತ್ತುಪಡಿಸಿ ರೈತರ ಮುಂದೆ ಹೋಗುತ್ತೆ?ನೆ. ರೈತರು ನನಗೆ ಎರಡೇಟು ಹೊಡೆಯಬಹುದು ಅಷ್ಟೆ? ತಾನೇ? ಬಟ್ಟೆ ಹರಿಯಬಹುದು, ಕಲ್ಲೆಸೆಯಬಹುದು, ಧಿಕ್ಕಾರ ಹಾಕಬಹುದು. ಎಲ್ಲವನ್ನೂ ಎದುರಿಸಲು ಸಿದ್ಧನಿದ್ದೆ?ನ ಎಂದು ಡಿಸಿಎಂ ಹೇಳಿದರು.

ಮುಂದಿನ ದಿನಗಳಲ್ಲಿ ಈ ರೈತರು ಮತ್ತು ಅವರ ಮಕ್ಕಳ ಭವಿಷ್ಯ ಮುಖ್ಯ. ಮುಂದಿನ 20 ವರ್ಷಗಳ ನಂತರ ಬಿಡದಿ ಮತ್ತು ಬೆಂಗಳೂರು ದಕ್ಷಿಣದ ಜನರು ನನ್ನ ಕೆಲಸವನ್ನು ನೆನಪಿಸಿಕೊಳ್ಳುತ್ತಾರೆ. ಭೂಮಿಯನ್ನು ಡಿನೋಟಿಫೈ ಮಾಡಲು ನಾನಂತೂ ತಯಾರಿಲ್ಲ ಎಂದು ತಿಳಿಸಿದರು.

**ಭೂ ಗ್ಯಾರಂಟಿ:** ಜನಸಾಮಾನ್ಯರು ಸಂಪಾದಿಸಿದ ಆಸ್ತಿಗಳಿಗೆ ಸರಿಯಾದ ರೀತಿಯಲ್ಲಿ ದಾಖಲೆಗಳನ್ನು ಒದಗಿಸಿಕೊಡಬೇಕು ಎಂದು ಆರನೇ ಗ್ಯಾರಂಟಿಯಾಗಿ 'ಭೂಮಿ ಗ್ಯಾರಂಟಿ' ಯೋಜನೆಯನ್ನು ಜಾರಿಗೊಳಿಸಿದ್ದೆ?ವೆ. ಜನರ ಮನೆ ಬಾಗಿಲಿಗೆ ಇ-ಖಾತೆಗಳನ್ನು ತಲುಪಿಸುವ ವ್ಯವಸ್ಥೆ ಮಾಡಿದ್ದೆ?ವೆ. 'ಬಿ' ಯಿಂದ 'ಎ' ಖಾತೆಗೆ ಬದಲಾವಣೆ ಮಾಡಿಕೊಡುತ್ತಿದ್ದೆ?ವೆ ಎಂದು ತಿಳಿಸಿದರು.

## ಪಿಂಚಣಿ ಕೊಡುವ ಯೋಗ್ಯತೆ ಇಲ್ಲ, ಯಾವ ಪುರುಷಾರ್ಥಕ್ಕೆ ಸಾಧನಾ ಸಮಾವೇಶ..?: ಕಾಂಗ್ರೆಸ್ ವಿರುದ್ಧ ಆರ್.ಅಶೋಕ್ ವಾಗ್ದಾಳಿ

**ಬೆಳಗಾವಿ ವಾರ್ತೆ ಬೆಂಗಳೂರು:** ರಾಜ್ಯದ ಹಿರಿಯ ನಾಗರಿಕರಿಗೆ ಪಿಂಚಣಿ ಕೊಡಲು ಯೋಗ್ಯತೆ ಇಲ್ಲದ ಕಾಂಗ್ರೆಸ್? ಸರ್ಕಾರ, ಯಾವ ಪುರುಷಾರ್ಥಕ್ಕೆ ಸಾಧನಾ ಸಮಾವೇಶ ಮಾಡುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವೈಫಲ್ಯಗಳನ್ನು ಮರೆಮಾಚಲು ಕಾಂಗ್ರೆಸ್ ಸರ್ಕಾರ ತುಮಕೂರಿನಲ್ಲಿ ಮೇ 20ರಂದು ಬೃಹತ್ ಸಮಾವೇಶ ಆಯೋಜಿಸಿದೆ ಎಂದು ಆರೋಪಿಸಿದರು.

ರಾಜ್ಯದ ಖಜಾನೆ ಖಾಲಿಯಾಗಿದ್ದು, ಹಿರಿಯ ನಾಗರಿಕರು, ವಿಧವೆಯರು, ಅನಾಥರು ಹಾಗೂ ತೃತೀಯಲಿಂಗಿಗಳಿಗೆ ನೀಡಬೇಕಾದ ಪಿಂಚಣಿ ಹಣವನ್ನು ಸರ್ಕಾರ ಬಿಡುಗಡೆ ಮಾಡಿಲ್ಲ. ರಾಜ್ಯದಲ್ಲಿ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ವಿಧವಾ ವೇತನ ಹಾಗೂ ತೃತೀಯಲಿಂಗಿ ಅಲ್ಪಸಂಖ್ಯಾತರಿಗೆ ನೀಡುವ





ಸಹಾಯಧನ ಬಾಕಿಯಾಗಿದೆ.

ರಾಜ್ಯದಲ್ಲಿ ಒಟ್ಟು 81.88 ಲಕ್ಷ ಫಲಾನುಭವಿಗಳಿದ್ದು, ಪ್ರತಿ ತಿಂಗಳು ರೂ.894 ಕೋಟಿ ಅಗತ್ಯವಿದೆ. ಬಜೆಟ್‌ನಲ್ಲಿ ವರ್ಷಕ್ಕೆ ರೂ.10,736 ಕೋಟಿ ಮೀಸಲಿದ್ದರೂ ಆ ಹಣ ಜನರಿಗೆ ತಲುಪಿಲ್ಲ ಎಂದು ಆರೋಪಿಸಿದರು.

ಆ್ಯಸಿಡ್ ದಾಳಿ ಸಂತ್ರಸ್ತರಿಗೆ ತಿಂಗಳಿಗೆ ರೂ.10 ಸಾವಿರ ನೆರವು ನೀಡಲು ನಾನು ಸಚಿವನಾಗಿದ್ದಾಗ ಕ್ರಮ ಕೈಗೊಂಡಿದ್ದೆ. ಆದರೆ, ಕಾಂಗ್ರೆಸ್ ಸರ್ಕಾರ ಅದನ್ನು ನಿಯಮಿತವಾಗಿ ಬಿಡುಗಡೆ ಮಾಡುತ್ತಿಲ್ಲ ಎಂದು ಕಿಡಿಕಾರಿದರು.

ದೇವದಾಸಿಯರಿಗೆ ರೂ.2 ಸಾವಿರ, ಸ್ವಾತಂತ್ರ್ಯ ಹೋರಾಟಗಾರರಿಗೆ ರೂ.10 ಸಾವಿರ ಹಾಗೂ ಆಶಾ ಕಾರ್ಯಕರ್ತೆಯರಿಗೆ ಭರವಸೆ ನೀಡಿದ್ದ ರೂ.10 ಸಾವಿರ ಗೌರವಧನವನ್ನೂ ಸರ್ಕಾರ ನೀಡುತ್ತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತು ಉಳಿಸಿಕೊಂಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ಇದೇ ವೇಳೆ ರಾಜ್ಯದಲ್ಲಿ 10 ಲಕ್ಷಕ್ಕೂ ಹೆಚ್ಚು ಬಾಂಗ್ಲಾದೇಶ ಮೂಲದವರು ಇದ್ದಾರೆ ಎಂದು ಗಂಭೀರ ಆರೋಪ ಮಾಡಿದ ಅವರು, ಬೆಂಗಳೂರಿನ ಮಹದೇವಪುರ, ಚಿಕ್ಕಮಗಳೂರು ಹಾಗೂ ಕೊಡಗಿನ ಕಾಫಿ ತೋಟಗಳಲ್ಲಿ ಸಾವಿರಾರು ಬಾಂಗ್ಲಾದೇಶಿಗಳು ನೆಲೆಸಿದ್ದಾರೆ ಎಂದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯಿಂದ ಬಾಂಗ್ಲಾದೇಶ ಮೂಲದವರು ಮತದಾನ ಮಾಡುವುದನ್ನು ತಡೆಯಬಹುದು. ಪ್ರತಿ ಮತಗಟ್ಟೆಯಲ್ಲೂ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಏಜೆಂಟ್‌ಗಳು ಇದ್ದಾರೆ. ಹೀಗಾಗಿ ನಿಜವಾದ ಮತದಾರರ ಹೆಸರು ಕೈಬಿಡುವ ಸಾಧ್ಯತೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಇಂಧನ ದರ ಏರಿಕೆ ಕುರಿತು ಮಾತನಾಡಿದ ಅವರು, "ಯುದ್ಧದಂತಹ ಪರಿಸ್ಥಿತಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆಯಾಗಿದೆ. ಮಲೇಶಿಯಾದಲ್ಲಿ ಶೇ.71ರಷ್ಟು ಪಾಕಿಸ್ತಾನದಲ್ಲಿ ಶೇ.44ರಷ್ಟು , ಯುಎಇಯಲ್ಲಿ ಶೇ.86ರಷ್ಟು, ಅಮೆರಿಕದಲ್ಲಿ ಶೇ.48ರಷ್ಟು, ಶ್ರೀಲಂಕಾದಲ್ಲಿ ಶೇ.41ರಷ್ಟು ಮತ್ತು ನೇಪಾಳದಲ್ಲಿ ಶೇ.51ರಷ್ಟು ದರ ಏರಿಕೆಯಾಗಿದೆ. ಭಾರತದಲ್ಲಿ ಮಾತ್ರ ಶೇ.3ರಷ್ಟು ಏರಿಕೆಯಾಗಿದೆ ಎಂದು ಸಮರ್ಥಿಸಿಕೊಂಡರು.

## ರಾಜ್ಯಸಭೆ ಚುನಾವಣೆ: ಬೆಳಗಾವಿಯಿಂದ ಮೋಹನ್ ಕಟರ್ಕಿ, ಅಂಜಲಿ ನಿಂಬಾಳ್ಕರ್ ಹೆಸರು ಮುನ್ನೆಲೆಗೆ, ಗೆದ್ದು ಬೀಗುವವರಾರು..?


**ಬೆಳಗಾವಿ ವಾರ್ತೆ ಬೆಂಗಳೂರು/ ಬೆಳಗಾವಿ:** ರಾಜ್ಯ ರಾಜಕಾರಣದಲ್ಲಿ ಸಚಿವ ಸಂಪುಟ ಪುನಾರಚನೆ ಮತ್ತು ನಾಯಕತ್ವ ಬದಲಾವಣೆ ಚರ್ಚೆಗಳು ತೀವ್ರಗೊಂಡಿರುವ ನಡುವಲ್ಲೇ ಇದೀಗ ಎಲ್ಲರ ಗಮನ ರಾಜ್ಯಸಭೆ ಚುನಾವಣೆಯತ್ತ ನೆಟ್ಟಿದೆ.

ಕರ್ನಾಟಕದಿಂದ ಖಾಲಿಯಾಗಲಿರುವ ನಾಲ್ಕು ರಾಜ್ಯಸಭೆ ಸ್ಥಾನಗಳಿಗೆ ನಡೆಯಲಿರುವ ಚುನಾವಣೆ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ಮೂಲಗಳ ಪ್ರಕಾರ, ಕರ್ನಾಟಕದಿಂದ ಖಾಲಿಯಾಗಲಿರುವ ನಾಲ್ಕು ರಾಜ್ಯಸಭಾ ಸ್ಥಾನಗಳಿಗೆ ಮೇ 18ರಂದು ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸುವ ಸಾಧ್ಯತೆ ಇದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಬಿಜೆಪಿ ನಾಯಕರಾದ ಈರಣ್ಣ ಕಡಾಡಿ ಮತ್ತು ಕೆ. ನಾರಾಯಣ ಅವರ ಅವಧಿ ಮುಕ್ತಾಯಗೊಳ್ಳಲಿರುವ ಹಿನ್ನೆಲೆಯಲ್ಲಿ ಈ ಚುನಾವಣೆ ನಡೆಯಲಿದೆ.

ವಿಧಾನಸಭೆಯಲ್ಲಿ 135 ಶಾಸಕರ ಬಲ ಹೊಂದಿರುವ ಕಾಂಗ್ರೆಸ್ ಮೂರು ಸ್ಥಾನಗಳನ್ನು ಗೆಲ್ಲುವ ಸ್ಥಿತಿಯಲ್ಲಿದೆ. ನಾಲ್ಕನೇ ಸ್ಥಾನ ಬಿಜೆಪಿ ಪಾಲಾಗುವ ಸಾಧ್ಯತೆ ಇದೆ





ಎಂದು ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಕಾಂಗ್ರೆಸ್‌ನ ಒಂದು ಸ್ಥಾನ ಮಲ್ಲಿಕಾರ್ಜುನ ಖರ್ಗೆಗೆ ಬಹುತೇಕ ಖಚಿತ ಎಂದು ಹೇಳಲಾಗುತ್ತಿದ್ದು, ಉಳಿದ ಎರಡು ಸ್ಥಾನಗಳಿಗೆ ತೀವ್ರ ಲಾಬಿ ನಡೆಯುತ್ತಿದೆ.

ಈ ನಡುವೆ ಬೆಳಗಾವಿ ಭಾಗದಿಂದ ಹಿರಿಯ ಸುಪ್ರೀಂ ಕೋರ್ಟ್ ವಕೀಲ ಮೋಹನ್ ಕಟರ್ಕಿ ಹೆಸರು ಬಲವಾಗಿ ಕೇಳಿಬರುತ್ತಿದೆ. ಕರ್ನಾಟಕದ ಪರವಾಗಿ ಹಲವು ಅಂತರರಾಜ್ಯ ಜಲವಿವಾದ ಪ್ರಕರಣಗಳಲ್ಲಿ ಸುಪ್ರೀಂ ಕೋರ್ಟ್ ಮತ್ತು ನ್ಯಾಯಮಂಡಳಿಗಳ ಮುಂದೆ ವಾದ ಮಂಡಿಸಿರುವ ಕಾತರಕಿ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಅವಕಾಶ ನೀಡುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ರಾಮದುರ್ಗ ತಾಲ್ಲೂಕಿನವರಾದ ಅವರಿಗೆ ಮುಂಬೈ-ಕರ್ನಾಟಕ ಭಾಗದೊಂದಿಗೆ ಆಳವಾದ ನಂಟಿದೆ.

ಇನ್ನೊಬ್ಬ ಪ್ರಬಲ ಆಕಾಂಕ್ಷಿಯಾಗಿ ಖಾನಾಪುರ ಮಾಜಿ ಶಾಸಕಿಯೂ, ಎಐಸಿಸಿ ವಕ್ತಾರೆಯೂ ಆದ ಡಾ. ಅಂಜಲಿ ನಿಂಬಾಳ್ಕರ್ ಹೆಸರು ಮುನ್ನೆಲೆಗೆ ಬಂದಿದೆ.

ಇತ್ತೀಚಿನ ತಿಂಗಳುಗಳಲ್ಲಿ ದೆಹಲಿ ರಾಜಕೀಯ ವಲಯದಲ್ಲಿ ಹೆಚ್ಚು ಸಕ್ರಿಯರಾಗಿರುವ ಅವರು, ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಕಾಂಗ್ರೆಸ್ ಹಿರಿಯ ನಾಯಕರೊಂದಿಗೆ ಹೊಂದಿರುವ ಆಪ್ತತೆ ಹಿನ್ನೆಲೆ ಮಹಿಳಾ ಕೋಟಾದಡಿ ಅವರಿಗೆ ಅವಕಾಶ ಸಿಗಬಹುದು ಎಂಬ ಮಾತುಗಳು ಕಾಂಗ್ರೆಸ್ ವಲಯದಲ್ಲಿ ಕೇಳಿಬರುತ್ತಿವೆ.

ಬೆಳಗಾವಿ ಜಿಲ್ಲೆಯ ಕಾಂಗ್ರೆಸ್ ನಾಯಕರು ಮೋಹನ್ ಕಟರ್ಕಿ ಪರ ಬಲವಾದ ಬೆಂಬಲ ವ್ಯಕ್ತಪಡಿಸುತ್ತಿದ್ದು, ರಾಜ್ಯಸಭೆ ಕೇವಲ ರಾಜಕಾರಣಿಗಳಿಗೆ ಮಾತ್ರ ಸೀಮಿತವಾಗದೇ, ಕರ್ನಾಟಕದ ಹಿತಾಸಕ್ತಿಗಾಗಿ ಹೋರಾಡಿದ ವೃತ್ತಿಪರರಿಗೂ ಅವಕಾಶ ಸಿಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಮತ್ತೆ ರಾಜ್ಯಸಭೆ ಪ್ರವೇಶಿಸುವುದು ಬಹುತೇಕ ಖಚಿತ ಎಂದು ಹೇಳಲಾಗುತ್ತಿದ್ದು, ಬಿಜೆಪಿ-ಜೆಡಿಎಸ್ ಮೈತ್ರಿಯ ಬೆಂಬಲದೊಂದಿಗೆ ಎಚ್.ಡಿ. ದೇವೇಗೌಡ ಕೂಡ ಪ್ರಬಲ ಸ್ಪರ್ಧಿಯಾಗಿ ಉಳಿದಿದ್ದಾರೆ.

ಇದೇ ವೇಳೆ ಬಿಜೆಪಿ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಹೆಸರನ್ನೂ ಪರಿಗಣಿಸುತ್ತಿದೆ. ಆದರೆ, ಈರಣ್ಣ ಕಡಾಡಿಗೆ ಮತ್ತೊಮ್ಮೆ ಅವಕಾಶ ನೀಡುವ ಸಾಧ್ಯತೆಯೂ ಇದೆ ಎಂದು ಮೂಲಗಳು ತಿಳಿಸಿವೆ.

## ಮರು ಮೌಲ್ಯ ಮಾಪನದಲ್ಲಿ ಒಂದು ಅಂಕ ರಾಜ್ಯಕ್ಕೆ ಪ್ರಥಮ



**ಬೆಳಗಾವಿ ವಾರ್ತೆ ಮೂಡಲಗಿ:** 2025-26 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ-1ರ ಫಲಿತಾಂಶದಲ್ಲಿ 624 ಅಂಕ ಪಡೆದ ಚೈತನ್ಯ ಆಶ್ರಮ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಯ ವಿವೇಕ್ ಸುಳ್ಳನ್ನವರ ಮರುಮೌಲ್ಯಮಾಪನದಲ್ಲಿ ಒಂದು ಅಂಕ ಪಡೆಯುವ ಮೂಲಕ 625ಕ್ಕೆ 625 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾನೆ.

ಇದೆ ಶಾಲೆಯ ಸೌಮ್ಯ ಸಿದ್ದಪ್ಪ ಪೂಜಾರಿ ವಿದ್ಯಾರ್ಥಿನಿಯ 619 ಅಂಕಗಳು ಮರು ಮೌಲ್ಯಮಾಪನದಲ್ಲಿ ಮೂರು ಅಂಕ ಪಡೆಯುವ ಮೂಲಕ 625 ಕ್ಕೆ 622 ಅಂಕಗಳನ್ನು ಪಡೆದು ರಾಜ್ಯಕ್ಕೆ ಮೂರನೇ ಸ್ಥಾನ ಪಡೆದಿದ್ದಾಳೆ.

ಸಾಧನೆ ಗೈದ ವಿದ್ಯಾರ್ಥಿಗಳನ್ನು ಬೆಮುಲ್ ಅಧ್ಯಕ್ಷ ಮತ್ತು ಶಾಸಕ ಬಾಲಚಂದ್ರ ಜಾರಕಿಹೊಳಿ, ಬಿಇಓ ಪ್ರಕಾಶ ಹಿರೇಮಠ ಹಾಗೂ ಶಾಲೆಯ ಆಡಳಿತ ಮಂಡಳಿಯವರಿಗೆ ಹಾಗೂ ಶಾಲೆಯ ಮುಖ್ಯೋಪಾಧ್ಯಯರು, ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳು.

## ಮದಭಾವಿ; ಅದ್ದೂರಿಯಾಗಿ ನಡೆದ ಧಾರ್ಮಿಕ ಶನಿ ಜಯಂತಿ

**ಬೆಳಗಾವಿ ವಾರ್ತೆ ಮೋಳೆ;-** ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿ ಭಾಗದ ಆರಾಧ್ಯ ದೈವ ಮಧಬಾವಿ ಗ್ರಾಮದ ಶ್ರೀ ಧನಶ್ರೀ ಶನೇಶ್ವರ ದೇವಸ್ಥಾನದಲ್ಲಿ ವಿಶೇಷ ಬಾದಮಿ ಅಮವಾಸ್ಯೆ ನಿಮಿತ್ತ ಹಾಗೂ ಶನಿ ಜಯಂತಿ ಅಂಗವಾಗಿ ಲೋಕ ಕಲ್ಯಾಣಕ್ಕಾಗಿ ಧಾರ್ಮಿಕ ಕಾರ್ಯಕ್ರಮ ಶನಿವಾರ ಅದ್ದೂರಿಯಾಗಿ ನಡೆದವು. ದೇವಸ್ಥಾನ ಪ್ರಧಾನ ಅರ್ಚಕ ಪ್ರವೀಣ ಶಾಸ್ತ್ರೀ ಹಿರೇಮ ಠ ಮಾತನಾಡಿ ವಿಶೇಷ ವಾಗಿ 13 ವರ್ಷಗಳಿಗೊಮ್ಮೆ ಆಗಮಿಸುವ ಶನಿವಾ ರದ ಬಾದಮಿ ಅಮವಾಸ್ಯೆ ನಿಮಿತ್ತ ಹಾ ಗೂ ಶನಿ ಜಯಂತಿ ಅಂಗವಾಗಿ ಲೋಕ ಕಲ್ಯಾಣಕ್ಕಾಗಿ ಸಾಮೂಹಿಕವಾಗಿ ಬೆಳಿಗ್ಗೆ ಪ್ರಾರ್ಥಕಾಲದಲ್ಲಿ ಶನಿ ದೇವರಿಗೆ ತೈಲಾ ಭಿಷೇಕ, ಪಂಚಾಮೃತ ಅಭಿಷೇಕ, ತೈಲಾ ಭಿಷೇಕ, ಫಲ ಪಂಚಾಮೃತ ಅಭಿ ಷೇಕಗ ಳನ್ನು ನಡೆಸಿ ನಂತರ ಗಣ ಹೊಮ ,ನವಗ್ರಹ ಹೊಮ,ಮಹಾ ಮೃತುಂಜಯ ಹೊಮ, ಶನಿ ಹೊಮ ಅವನ್ನು ನೇರವೇ ರಿಸಿ ಸಾರ್ವಜನಿಕವಾಗಿ ದೇವರು ಓಳ್ಳೆಯದನ್ನು ಮಾಡಲಿ ಎಂದು ಪ್ರಾರ್ಥನೆ ಮಾಡಲಾಯಿತು, ಸನಾತನ ಧರ್ಮದ ವಿಶೇಷತೆ ಎನೆಂದರೆ ದೇವತೆ ಗಳನ್ನು ಆರಾಧನೆ ಮತ್ತು ಪರೋಪಕಾರ ಎಷ್ಟು ನಾವುಗಳು ದೇವತೆಗಳನ್ನು ಆರಾಧನೆ ಮಾ ಡುತ್ತಾ ಬರುತ್ತೆವೊ ಅಷ್ಟು ನಮಗೆ ಪುಣ್ಯ ಫಲಗಳು ಪ್ರಾಪ್ತಿ ಯಾಗು ತ್ತದೆ ಹೋಗು ತ್ತವೆ ಬರುವಂತಹ ದಿನಗಳು ಜನರಿಗೆ ಸುಖ ಶಾಂತಿ ನೆಮ್ಮದಿ ಕರುಣಿ ಸಲಿ ಎಂದು ಕೇಳಿಕೊಳ್ಳುತ್ತೆನೆ ಎಂದು ಹೇಳಿ ದರು.



ಮೋಳೆ: ಮದಭಾವಿ ಗ್ರಾಮದ ಬಾದಮಿ ಅಮವಾಸ್ಯೆ ನಿಮಿತ್ತ & ಶನಿ ಜಯಂತಿ ಅಂಗವಾಗಿ ಲೋಕ ಕಲ್ಯಾಣಕ್ಕಾಗಿ ಧಾರ್ಮಿಕ ಕಾರ್ಯಕ್ರಮದಲ್ಲಿ ಶ್ರೀ ಪ್ರವೀಣ ಶಾಸ್ತ್ರೀ ಹಿರೇಮಠ ಅವರು ಹೋಮ,ಹವನಗಳನ್ನು ಮಾಡುತ್ತಿರುವ ಚಿತ್ರ.

ಶನಿ ದೇವರಿಗೆ ಅಮವಾಸ್ಯೆ ನಿಮಿತ್ತ ವಿಶೇಷ ಅಲಂಕಾರ ಮಾಡಲಾಗಿತ್ತು ಹೊಮ ಹವನ ಕಾರ್ಯಕ್ರಮದಲ್ಲಿ ಸುತ್ತ ಮುತ್ತಲಿನ ಜಿಲ್ಲೆಗಳ ಹಾಗೂ ನೆರೆ ಮಹಾ ರಾಷ್ಟ್ರ ರಾಜ್ಯದ ಸುಮಾರು 20 ಸಾವಿರಕ್ಕೂ ಹೆಚ್ಚು ಭಕ್ತರು ಪಾಲ್ಗೊಂಡ ಪುನಿತರಾದರು.

ಈ ವೇಳೆ ಧರ್ಮಾಧಿಕಾರಿ ಮಾರುತಿ ಭಂಡಾರ ಪ್ರಧಾನ ಅರ್ಚಕರು ಎಸ್ ಪ್ರವೀಣ್ ಶಾಸ್ತ್ರಿ ಹಿರೇಮಠ, ಇಂದುಧರ ಸ್ವಾಮಿ, & ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು ಇದ್ದರು.

## ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಅಂಚೆ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಮೇ 18 ರಂದು ಬೆಳಿಗ್ಗೆ 11 ಗಂಟೆಗೆ ಬಾಗಲಕೋಟೆ ಸ್ಟೇಷನ್ ರಸ್ತೆ ಬಳಿಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಸಂದರ್ಶನಕ್ಕೆ ಹಾಜರಾಗುವವರು 10ನೇ ತರಗತಿ ಉತ್ತೀರ್ಣರಾಗಿರುವುದು ಕಡ್ಡಾಯವಾಗಿದೆ. ವಯೋಮಿತಿ 18 ರಿಂದ ಗರಿಷ್ಟ ವಯೋಮಿತಿ ಇರುವದಿಲ್ಲ. ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಎಜೆಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಂಚೆ ಜೀವವಿಮಾ ಅಭಿವೃದ್ಧಿ ಅಧಿಕಾರಿಗಳನ್ನು (8217297792, 7337899266) ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಕ್ರಿಕೆಟ್ ಟೂರ್ನಾಮೆಂಟ್



**ಬೆಳಗಾವಿ ವಾರ್ತೆ ನವಲಗುಂದ:** ತಾಲೂಕಿನ ಶಲವಡಿ ಗ್ರಾಮದಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಯುವಕರಿಗಾಗಿ ಪ್ರಧಾನಿ ನರೇಂದ್ರ ಮೋದಿ ರವರ ನಾಮಾಂಕಿತ ನಮೋ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಆಯೋಜಕರಾದ ಬಿಜೆಪಿ ಮುಖಂಡರಾದ ದೇವರಾಜ್ ಬ. ಧಾಡಿಬಾವಿ ಭಾಗವಹಿಸಿ ಮಾತನಾಡಿ, ಹಳ್ಳಿಗಳು ಹಾಗೂ ಸಣ್ಣ ಪಟ್ಟಣಗಳ ಯುವ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸಿ ಗ್ರಾಮೀಣ ಪ್ರತಿಭೆಗಳ ಪ್ರೋತ್ಸಾಹಿಸುವುದು. ಯುವಜನರಲ್ಲಿ ಕ್ರೀಡಾ ಆಸಕ್ತಿ ಹೆಚ್ಚಿಸುವುದು ಮತ್ತು ಫಿಟ್‌ನೆಸ್ ಕಾಪಾಡಿಕೊಳ್ಳಲು ಪ್ರೇರೇಪಿಸುವುದಾಗಿದೆ. ಯುವಕರು ಕ್ರೀಡಾಕೂಟದಲ್ಲಿ ಭಾಗವಹಿಸುವಂತೆ ವಿನಂತಿಸಿದರು.

ಮುಖಂಡರಾದ ಸಿದ್ದನಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಯುವಕರಲ್ಲಿ ನಾಯಕತ್ವ ಗುಣ, ದೈಹಿಕ ಹಾಗೂ ಮಾನಸಿಕ ಸದೃಢತೆ ಬೆಳೆಸಲು ಕ್ರೀಡೆ ಅತ್ಯಂತ ಅವಶ್ಯಕವಾಗಿದೆ. ಈ ವೇದಿಕೆಯು ನಿಮ್ಮಲ್ಲಿರುವ ಪ್ರತಿಭೆಯನ್ನು ಹೊರಹಾಕಲು ಉತ್ತಮ ಅವಕಾಶವಾಗಿದೆ, ಎಲ್ಲರೂ ಕ್ರೀಡಾಸ್ಫೂರ್ತಿಯಿಂದ ಪಾಲ್ಗೊಳ್ಳಬೇಕೆಂದುರು.

ಈ ಸಂದರ್ಭದಲ್ಲಿ ಬಿ.ಎಫ್. ರೋಣದ, ಶ್ರೀಶೈಲಪ್ಪ ಹುಯಿಲಗೋಳ, ಮಲ್ಲಿಕಾರ್ಜುನ ಹಳ್ಳಿ, ಶ್ರೀಶೈಲ ಬಸವರಡ್ಡಿ, ಉಮೇಶ ಶಿರೋಳ, ರುದ್ರಗೌಡ ಎಮ್ಮಿ, ವಿ.ಬಿ.ಸಾಮ್ರಾಣಿ, ಶಂಭು ನಡುವಿನಹಳ್ಳಿ ಮತ್ತಿತರರು ಉಪಸ್ಥಿತರಿದ್ದರು.

# ಹಕ್ಕು ಪತ್ರ ವಿತರಣೆ



**ಬೆಳಗಾವಿ ವಾರ್ತೆ ಹಾನಗಲ್:** ಒಂದೆಡೆ ರಾಜ್ಯ ಸರ್ಕಾರ ಬೆಲೆ ಏರಿಕೆ ಬಿಸಿಯಿಂದ ತತ್ತರಿಸಿರುವ ಜನರ ನೆರವಿಗೆ ಗ್ಯಾರಂಟಿ ಯೋಜನೆಗಳ ಮೂಲಕ ಸಹಾಯದ ಹಸ್ತ ಚಾಚಿದ್ದರೆ ಇನ್ನೊಂದೆಡೆ ಕೇಂದ್ರ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸಿ, ಜನಸಾಮಾನ್ಯರ ಗಾಯದ ಮೇಲೆ ಬರೆ ಎಳೆಯುತ್ತಿದೆ. ಪ್ರತಿಯೊಂದಕ್ಕೂ ನಿರ್ಬಂಧ ಹೇರುತ್ತಿದೆ ಎಂದು ಶಾಸಕ ಶ್ರೀನಿವಾಸ ಮಾನೆ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಬಮ್ಮನಹಳ್ಳಿ ಗ್ರಾಮದ ವಿರಕ್ತಮಠದ ಆವರಣದಲ್ಲಿ ನಾನಾ ಕಂದಾಯ ಗ್ರಾಮ, ಉಪ ಗ್ರಾಮಗಳ ಒಟ್ಟು 680 ಫಲಾನುಭವಿ ಕುಟುಂಬಗಳಿಗೆ ಶಾಶ್ವತ ಮನೆ ಮಾಲಿಕತ್ವದ ಹಕ್ಕುಪತ್ರ ವಿತರಿಸಿ ಅವರು ಮಾತನಾಡಿದರು. ಶಿಗ್ಗಾಂವಿ, ಸವಣೂರು ಕ್ಷೇತ್ರದ ಶಾಸಕ ಯಾಸೀರ್‌ಖಾನ ಪಠಾಣ ತಹಶೀಲ್ದಾರ್ ರೇಣುಕಾ ಎಸ್. ಮಾತನಾಡಿದರು.

# ಲಿಂಗದಳ್ಳಿಯಲ್ಲಿ ಗ್ರಾಮದೇವತೆ ಜಾತ್ರಾ ಮಹೋತ್ಸವ ಅದ್ದೂರಿ: ಭವ್ಯ ರಥೋತ್ಸವ, ವಿವಿಧ ಕಲಾತಂಡಗಳಿಂದ ಸಾಂಸ್ಕೃತಿಕ ವೈಭವ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಳಿಕೋಟಿ ತಾಲೂಕಿನ ಲಿಂಗದಳ್ಳಿ ಗ್ರಾಮದಲ್ಲಿ ಶ್ರೀ ಗ್ರಾಮದೇವತೆ ಜಾತ್ರಾ ಮಹೋತ್ಸವವು ಅತ್ಯಂತ ಶ್ರದ್ಧಾಭಕ್ತಿ, ಸಡಗರ–ಸಂಭ್ರಮ ದಿಂದ ಸಾರ್ವಜನಿಕರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಶುಕ್ರವಾರ ಬೆಳಿಗ್ಗೆಯಿಂದಲೇ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಆರಂಭಗೊಂಡವು. ಬೆಳಿಗ್ಗೆ 6 ಗಂಟೆಗೆ ಸಾಂಪ್ರದಾಯಿಕ ಗಂಗಾಸ್ಥಳ ಮುಗಿಸಿಕೊಂಡು ಬಂದ ಬಳಿಕ, ಸಕಲ ಮಂಗಲ ವಾದ್ಯ ವೈಭವಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಗ್ರಾಮದೇವತೆಯ ಭವ್ಯ ರಥೋತ್ಸವ ಸಾಗಿತು. ಹರಹರ ಮಹಾದೇವ ಘೋಷಣೆಗಳ ಮಧ್ಯೆ ಭಕ್ತಾದಿಗಳು ತೇರಿಗೆ ಉತ್ತತ್ತಿ, ಬಾಳೆಹಣ್ಣು ಸಮರ್ಪಿಸಿ ಧನ್ಯತೆ ಅನುಭವಿಸಿದರು. ಜಾತ್ರೆಗೆ ಆಗಮಿಸಿದ ಸಾವಿರಾರು ಭಕ್ತಾದಿಗಳಿಗೆ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಶನಿವಾರ ಬೆಳಿಗ್ಗೆ ಸಕಲ ಧಾರ್ಮಿಕ ವಿಧಿವಿಧಾನಗಳೊಂದಿಗೆ ದೇವಿಯು ಗರ್ಭಗುಡಿ ಪ್ರವೇಶ ಕಾರ್ಯಕ್ರಮ ನೆರವೇರಿತು.

ಜಾತ್ರಾ ಮಹೋತ್ಸವದ ಅಂಗವಾಗಿ



ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರ ಗಮನ ಸೆಳೆದವು. ಸಾರವಾಡದ ಈಶ್ವರ ಗಾರುಡಿ ಗೊಂಬೆ ಗೆಳೆಯರ ಬಳಗ, ಬಾದಾಮಿ ತಾಲೂಕಿನ ಗೋವಿನಕೊಪ್ಪದ ಶ್ರೀ ಮಾಲಿಂಗರಾಯ ಮಹಿಳಾ ಡೊಳ್ಳು ಕುಣಿತ ತಂಡ ಹಾಗೂ ಕವಿತಾ ಮುದ್ದೇಬಿಹಾಳ, ಅಕ್ಷತಾ ಕವನೂರ ಮತ್ತು ಮಂಜುಳಾ ಹಡಗಲಿ ತಂಡದವರಿಂದ ಮಂಗಳಮುಖಿಯರ ನೃತ್ಯ ಪ್ರದರ್ಶನ ಜರುಗಿತು. ಬಳಿಕ ಹನಗುಂದದ 'ಎ.ಎನ್. ಕಲಾತಂಡ'ದ ಮಾಲೀಕ ಮಂಜು ಇಟಗಿ ನೇತೃತ್ವದಲ್ಲಿ ಮುತ್ತು ಹಳಿಯಾಳ ಮತ್ತು ಸಂಜನಾ ಡಿ.ಕೆ.ಡಿ ಅವರಿಂದ ನಡೆದ ರಸಮಂಜರಿ ಕಾರ್ಯಕ್ರಮ ನೆರೆದಿದ್ದ ಜನಸ್ತೋಮವನ್ನು ತಡರಾತ್ರಿಯವರೆಗೆ ರಂಜಿಸಿತು.

ಸಂಜೆ ನಡೆದ ಧಾರ್ಮಿಕ ಸಭೆಯ ದಿವ್ಯ ಸಾನಿಧ್ಯವನ್ನು ಸಂತೆಕಲ್ಲೂರ ಹಾಗೂ ಫಿರೋಜಾಬಾದ್‌ನ ಶ್ರೀ ಘನಲಿಂಗೇಶ್ವರ ಮಠದ ಶ್ರೀ ಮ.ನಿ.ಪ್ರ. ಗುರುಬಸವ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು. ಮುಖ್ಯ ಅತಿಥಿಗಳಾಗಿ ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥ ಡಾ. ಪ್ರಭುಗೌಡ ಬ. ಪಾಟೀಲ ಭಾಗವಹಿಸಿದ್ದರು.

ಇದೇ ವೇಳೆ ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷ ಹಾಗೂ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಲಾಲೇಸಾಬ ಬಾ. ಶೇಖ್ (ಜಮಾದಾರ) ಅವರನ್ನು ಅತ್ಯಂತ ಗೌರವದಿಂದ ಸನ್ಮಾನಿಸಲಾಯಿತು. ದೇಶದ ರಕ್ಷಣೆಗೆ ಶ್ರಮಿಸಿದ ಗ್ರಾಮದ ನಿವೃತ್ತ ಯೋಧರಾದ ರಾಚಯ್ಯ ಹಿರೇಮಠ, ಬಾಪುಗೌಡ ಪಾಟೀಲ್ ಹಾಗೂ ಧರ್ಮಸಿಂಗ್ ಪವಾರ್ ಅವರನ್ನು ಜಾತ್ರಾ ಮಂಡಳಿಯಿಂದ ಗೌರವಿಸಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ಗಣ್ಯರನ್ನು ಸ್ಮರಿಸಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಊರಿನ ಪ್ರಮುಖರಾದ ಬಸನಗೌಡ ಬಸರಕೋಡ, ಬಸಯ್ಯ ಚ. ಹಿರೇಮಠ, ಗುರಣ್ಣಗೌಡ ಮೇಟಿ, ಶಿವಾನಂದ ಹಿರೇಮಠ, ಅಯ್ಯನಗೌಡ ನಾಡಗೌಡ, ಸಂಗನಗೌಡ ಮೇಟಿ, ರಾಮನಗೌಡ (ಮುದ್ದುಗೌಡಾ) ಬಿರಾದಾರ, ಪ್ರಭುಗೌಡ ಭೀ. ಪಾಟೀಲ, ಪ್ರಕಾಶ ದೊರೆಗೋಳ, ರುದ್ರಗೌಡ ಪ್ರ. ಪಾಟೀಲ, ಗುರಸಂಗಪ್ಪಗೌಡ ಬಿರಾದಾರ, ಪ್ರಭುಗೌಡ ಬಿರಾದಾರ, ಎಂ.ಬಿ. ಕುಂಬಾರ ಗುರುಗಳು, ಮಲ್ಲನಗೌಡ ನಾಡಗೌಡ, ಹೇಮರೆಡ್ಡಿ ಮೇಟಿ, ಗಂಗಾಧರ ಮೇಟಿ, ಬಸನಗೌಡ ಅ. ಮೇಟಿ, ಬಸನಗೌಡ ಪಾಟೀಲ್, ಅಮರೇಶ ನಾಡಗೌಡ,ರಮೇಶ ಪಾಟೀಲ, ಶ್ರೀಶೈಲ ಮೇಟಿ, ಗುತ್ತಣ್ಣ ಬಸರಕೋಡ ಸೇರಿದಂತೆ ನೂರಾರು ಸದ್ಭಕ್ತರು ಉಪಸ್ಥಿತರಿದ್ದರು.

# ಸನ್ಮಾನ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಕರ್ನಾಟಕ ರಾಜ್ಯ ನದಾಫ್ ಪಿಂಜಾರ್ ಸಂಘ ಹುಬ್ಬಳ್ಳಿ ತಾಲೂಕ ಶಹರ ಘಟಕದ ಉಪಾಧ್ಯಕ ದಿವಾನ್ ಸಾಬ್ ನದಾಫ್ ಅವರಿಗೆ ಚೆನ್ನೈ ಏಷ್ಯಾ ಇಂಟರನ್ಯಾಷನಲ್ ಕಲ್ಚುರಲ್ ಅಂಡ್ ರಿಸರ್ಚ್ ಯುನಿವರ್ಸಿಇನ್ವರ್ಸಿಟಿಯಿಂದ ಗೌರವ ಡಾಕ್ಟರೇಟ್ ಪದವಿ ನೀಡಿದ ಕಾರಣ ಸಂಘದ ಧಾರವಾಡ ಜಿಲ್ಲಾ ಘಟಕ ಹಾಗೂ ಹುಬ್ಬಳ್ಳಿ ತಾಲೂಕ ಶಹರ ವ ಗ್ರಾಮೀಣ ಘಟಕದ ವತಿಯಿಂದ ಸನ್ಮಾಸಲಾಯಿತು.

ಮಾಜಿ ಪಾಲಿಕೆ ಮಾಜಿ ಸದಸ್ಯರಾದ ಹಜರತ್ ಅಲಿ ದೂಡ್ಡಮನಿ ಮಾಜಿ ರಾಜ್ಯ ಪ್ರಕಾರ್ಯದರ್ಶಿ ಪಿ ಬಿ ನದಾಫ್ ಉಪಾಧ್ಯಕ್ಷರಾದ ಎಮ್ ಎಚ್ ಬೆಂಡಿಗೇರಿ ಧಾರವಾಡ ಜಿಲ್ಲಾ ಅಧ್ಯಕ್ಷರಾದ ಎಫ್ ಎಮ್ ನದಾಫ್ ಖ್ವಾಜಾಸಾಬ ನದಾಫ್ ಜಿಲ್ಲಾ ಕಾರ್ಯದರ್ಶಿ ದಾವಲಸಾಬ ನದಾಫ್ ಹುಬ್ಬಳ್ಳಿ ತಾಲೂಕು ಶಹರ ಅಧ್ಯಕ್ಷ ಖುದಾನಸಾಬ ಗೂಗ್ಗಲ್ ಇಸ್ಮಾಯಿಲ್ ಸಾಬ್ ನದಾಫ್ ಎನ್ ಎಸ್ ನದಾಫ್ ರಫೀಕ್ ಅಹ್ಮದ್ ದೂಡ್ಡಮನಿ, ರಿಯಾಜ್ ಅಹ್ಮದ ಕೆ ನದಾಫ್ ಖಾದರ್ ಬಾಷಾ ಶಿಬಾರಗಟ್ಟಿ, ಹಜರತ್ ಅಲಿ ನದಾಫ್, ನಜಿರಸಾಬ ಕುಂದಗೋಳ, ಹಸ ನಸಾಬ ನದಾಫ್, ಎಮ್ ಕೆ ನದಾಫ್, ಖಲಂದರ ಜಿಗಳೂರ, ಮಲಂಗಸಾಬ ನದಾಫ್, ಖಾದರಸಾಬ ನದಾಫ್, ಬಾಲೆಸಾಬ ಪಿಂಜಾರ,



ಮಹಬೂಬಸಾಬ ನದಾಫ್, ಹನಿಫ್ ನದಾಫ್, ರಾಜೇಸಾಬ ಚಿಂಚಲಿ,ಎಚ್ ಎಫ್ ಬೆಟಗೇರಿ, ಆರ್ ವಾಯ್ ನದಾಫ್ ಸರ್ ಕಾರ್ಯಕ್ರಮ ನಿರೂಪಣೆ ಮಾಡಿದರು, ತಾಲೂಕು ಕಾರ್ಯದರ್ಶಿ ಅಬ್ದುಲ್ ನಬಿ ನದಾಫ್ ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ –2 : ಪೂರ್ವಭಾವಿ ಸಭೆ

# ಪರೀಕ್ಷೆ ವ್ಯವಸ್ಥಿತವಾಗಿ ನಡೆಸಲು ಕ್ರಮ ವಹಿಸಿ



**ಬೆಳಗಾವಿ ವಾರ್ತೆ ಗದಗ :** ಜಿಲ್ಲೆಯಲ್ಲಿ ಮೇ 18 ರಿಂದ 25 ರವರೆಗೆ ಜರುಗುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಯನ್ನು ವ್ಯವಸ್ಥಿತವಾಗಿ ಅಚ್ಚುಕಟ್ಟಾಗಿ ನಡೆಸಲು ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಒಟ್ಟು 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪ ದೋಷಗಳಾಗದಂತೆ ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ ಬಂದೋಬಸ್ತ, ಪರೀಕ್ಷೆಗಳನ್ನು ಪಾರದರ್ಶಕವಾಗಿ ಹಾಗೂ ಸುಗಮವಾಗಿ ಜರುಗಿಸುವ ಕುರಿತು ಸೂಕ್ತ ವ್ಯವಸ್ಥೆ ಕೈಗೊಳ್ಳುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಜಿಲ್ಲಾ ನೋಡಲ್ ಅಧಿಕಾರಿ ಎಚ್.ಬಿ.ರಡ್ಡೇರ್ , ಡಿವೈಪಿಸಿ ಎಂ.ಎಸ್.ಕಂಬಳಿ, ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಜರಿದ್ದರು.

ಎಸ್ ಎಸ್ ಎಲ್ ಸಿ ಪರೀಕ್ಷೆ–2 ಮೇ 18 ರಿಂದ 25 ರವರೆಗೆ ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು ಒಟ್ಟು 1905 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

**ಎಸ್‌ಎಸ್‌ಎಲ್‌ಸಿ ಪರೀಕ್ಷೆ– 2 ರ ವೇಳಾಪಟ್ಟಿ:**

ಮೇ 18 ರಂದು ಬೆಳಿಗ್ಗೆ 10 ಗಂಟೆಯಿಂದ ಮ.1.15 ರವರೆಗೆ ಪ್ರಥಮ ಭಾಷೆ –ಕನ್ನಡ, ತೆಲಗು, ಹಿಂದಿ, ಮರಾಠಿ, ತಮಿಳು, ಉರ್ದು, ಇಂಗ್ಲೀಷ್ , ಇಂಗ್ಲೀಷ್ ( ಎನ್ ಸಿ ಇ ಆರ್ ಟಿ) ಸಂಸ್ಕೃತ ; ಮೇ 19 ರಂದು ಬೆ 10. ಗಂಟೆಯಿಂದ ಮ. 1.15 ರವರೆಗೆ ಕೋರ್ ಸಬ್ಜೆಕ್ಟ್ –ವಿಜ್ಞಾನ , ರಾಜ್ಯಶಾಸ್ತ್ರ, ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ ; ಮೇ 20 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯುವರೆಗೆ ದ್ವಿತೀಯ ಭಾಷೆ ಇಂಗ್ಲೀಷ್, ಕನ್ನಡ ; ಮೇ 21 ರಂದು ಬೆ.10 ಗಂಟೆಯಿಂದ ಮ.1.00 ಗಂಟೆಯವರೆಗೆ ಕೋರ್ ಸಬ್ಜೆಕ್ಟ್ ; ಗಣಿತ, ಸಮಾಜ ಶಾಸ್ತ್ರ; ಮೇ 22 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ತೃತೀಯ ಭಾಷೆ – ಹಿಂದಿ( ಎನ್ ಸಿ ಇ ಆರ್ ಟಿ), ಕನ್ನಡ, ಇಂಗ್ಲೀಷ್ , ಅರೇಬಿಕ್ , ಉರ್ದು, ಸಂಸ್ಕೃತ, ಕೊಂಕಣಿ, ತುಳು, ಮರಾಠಿ; ಬೆಳಿಗ್ಗೆ 10 ರಿಂದ ಮ. 12.15 ರವರೆಗೆ ಎನ್.ಎಸ್.ಕ್ಯೂ ಎಫ್ ವಿಷಯಗಳು – ಮಾಹಿತಿ ತಂತ್ರಜ್ಞಾನ, ರಿಟೇಲ್ , ಆಟೋಮೊಬೈಲ್, ಬ್ಯೂಟಿ ಆಂಡ್ ವೆಲ್‌ನೆಸ್, ಅಪರೆಲ್ ಮೇಡ್ ಆಪ್ಸ್ & ಹೋಮ್ ಫರ್ನಿಷಿಂಗ್ , ಎಲೆಕ್ಟ್ರಾನಿಕ್ಸ್ & ಹಾರ್ಡವೇರ್, ಮೇ 23 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ಕೋರ್ ಸಬ್ಜೆಕ್ಟ್ –ಸಮಾಜ ವಿಜ್ಞಾನ; ಮೇ 25 ರಂದು 10 ರಿಂದ ಮ. 1.15 ಗಂಟೆಯುವರೆಗೆ ಜೆ.ಟಿ.ಎಸ್.ವಿಷಯಗಳು: ಎಲಿಮೆಂಟ್ಸ್ ಆಫ್ ಎಲೆಕ್ಟ್ರಿಕಲ್ ಇಂಜನೀಯರಿಂಗ್ – ಖಗಿ, ಎಲಿಮೆಂಟ್ಸ್ ಆಫ್ ಮೆಕ್ಯಾನಿಕಲ್ ಇಂಜನೀಯರಿಂಗ್ [illegible] ಖಗಿ, ಎಲಿಮೆಂಟ್ಸ್ ಆಫ್ ಎಲೆಕ್ಟ್ರಾನಿಕ್ಸ್ ಇಂಜನೀಯರಿಂಗ್ – ಖಗಿ, ಪ್ರೋಗ್ರಾಮಿಂಗ್ ಇನ್ ಂಓಖಖ 'ಅ' ', ಅರ್ಥಶಾಸ್ತ .

# ಮುದ್ದೇಬಿಹಾಳ: ನದಾಫ್ ಸಂಘದ ಸಂಸ್ಥಾಪಕ ದಿ. ಹಾಜಿ ಹೆಚ್. ಇಬ್ರಾಹಿಂ ಸಾಹೇಬರ ಜನ್ಮದಿನಾಚರಣೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಪಟ್ಟಣದ ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘದ ವತಿಯಿಂದ ಇಲ್ಲಿನ ವಿದ್ಯಾನಿಕೇತನ ಶಾಲೆಯಲ್ಲಿ ಸಂಘದ ಸಂಸ್ಥಾಪಕ ಅಧ್ಯಕ್ಷರು ಹಾಗೂ 'ಪಿಂಜಾರ ರತ್ನ' ಎಂದೇ ಖ್ಯಾತರಾಗಿದ್ದ ದಿ. ಹಾಜಿ ಹೆಚ್. ಇಬ್ರಾಹಿಂ ಸಾಹೇಬರ ಜನ್ಮದಿನವನ್ನು ಅತ್ಯಂತ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಶಿಕ್ಷಕ ಟಿ.ಎನ್. ರೂಡಗಿ ಅವರು, "ಸಮಾಜವನ್ನು ಅತ್ಯಂತ ಕೆಳಮಟ್ಟದಿಂದ ಒಗ್ಗೂಡಿಸಿ, ಸಂಘಟನೆಯ ಬಲವರ್ಧನೆಗೆ ರಾತ್ರಿ–ಹಗಲು ಶ್ರಮಿಸಿದ ಕೀರ್ತಿ ಹಾಜಿ ಇಬ್ರಾಹಿಂ ಸಾಹೇಬರಿಗೆ ಸಲ್ಲುತ್ತದೆ. ಹಿಂದುಳಿದ ನದಾಫ್/ಪಿಂಜಾರ ಸಮುದಾಯಕ್ಕೆ ಪ್ರವರ್ಗ–1ರ ಅಡಿಯಲ್ಲಿ ಮೀಸಲಾತಿ ಸೌಲಭ್ಯ ದೊರಕಿಸಿಕೊಡುವಲ್ಲಿ ಅವರು ವಹಿಸಿದ ಮಹತ್ವದ ಪಾತ್ರ ಎಂದಿಗೂ ಸ್ಮರಣೀಯ," ಎಂದು ಅವರ ಸಾಧನೆಯನ್ನು ಕೊಂಡಾಡಿದರು.

ಈ ಸಂದರ್ಭದಲ್ಲಿ ಸಂಘದ ತಾಲೂಕು ಘಟಕದ ಅಧ್ಯಕ್ಷ ಮಲಿಕಸಾಬ ನದಾಫ್, ಉಪಾಧ್ಯಕ್ಷರಾದ ಮಕ್ತುಮಸಾಬ ನದಾಫ್, ಮೌಲಾಸಾಬ ನದಾಫ್, ಲಾಡ್ಲೇಮಶಾಕ್ ನದಾಫ್, ಪ್ರಮುಖರಾದ ಎನ್.ಬಿ. ಪಿಂಜಾರ, ದಾವಲಸಾಬ ವಾಲಿಕಾರ, ಹಸನಸಾಬ ಕವಡಿಮಟ್ಟಿ, ಬಾಬು ತಮದಡ್ಡಿ, ರಜಾಕ್ ಭೈರವಾಡಗಿ, ಹೆಚ್.ಐ. ಢವಳಗಿ, ಲಾಳೆಸಾಬ ದಿಡ್ಡಿಮನಿ ಹಾಗೂ ಅಬ್ದುಲ್ ರಜಾಕ್ ಮುದ್ನಾಳ ಸೇರಿದಂತೆ ಸಮುದಾಯದ ಮುಖಂಡರು ಉಪಸ್ಥಿತರಿದ್ದರು. ಸಂಘದ ಪ್ರಧಾನ ಕಾರ್ಯದರ್ಶಿ ಬಾಬು ದಿಡ್ಡಿಮನಿ ಅವರು ಕಾರ್ಯಕ್ರಮಕ್ಕೆ ಆಗಮಿಸಿದ್ದ ಎಲ್ಲರನ್ನೂ ಸ್ವಾಗತಿಸಿ, ಕೊನೆಯಲ್ಲಿ ವಂದನಾರ್ಪಣೆ ಮಾಡಿದರು.

# ಮುದ್ದೇಬಿಹಾಳ: ಭಾರಿ ಗಾಳಿ ಮಳೆಗೆ ಮರ ಬಿದ್ದು ವೃದ್ಧ ರೈತ ಸಾವು; ಮೃತನ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದ ಶಾಸಕ ಸಿ.ಎಸ್. ನಾಡಗೌಡ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನಲ್ಲಿ ಗುರುವಾರ ಸಂಜೆ ಸುರಿದ ಭಾರಿ ಗಾಳಿ ಮಳೆಗೆ ರಸ್ತೆ ಬದಿ ನಿಂತಿದ್ದ ವೃದ್ಧ ರೈತರೊಬ್ಬರ ಮೇಲೆ ಮರ ಬಿದ್ದು, ಅವರು ಸ್ಥಳದಲ್ಲೇ ಮೃತಪಟ್ಟ ದುರ್ಘಟನೆ ತಾಲೂಕಿನ ಬಿದರಕುಂದಿ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ನಿವಾಸಿಯಾದ ರೈತ ಬಸಲಿಂಗಪ್ಪ ದೊಡ್ಡಬಸಪ್ಪ ಕಡೂರ (68) ಮೃತಪಟ್ಟ ದುರ್ದೈವಿ. ಗುರುವಾರ ಸಂಜೆ ಇದ್ದಕ್ಕಿದ್ದಂತೆ ಗಾಳಿ ಆಲಿಕಲ್ಲು ಸಹಿತ ಭಾರಿ ಮಳೆ ಶುರುವಾದಾಗ, ರಸ್ತೆ ಬದಿಯಲ್ಲಿ ಆಸರೆಗಾಗಿ ನಿಂತಿದ್ದ ವೇಳೆ ಅವರ ಮೇಲೆ ಮರ ಮುರಿದು ಬಿದ್ದಿದ್ದೇ ಈ ದುರಂತಕ್ಕೆ ಕಾರಣ ಎನ್ನಲಾಗಿದೆ.

**ಮೃತರ ಮನೆಗೆ ಶಾಸಕರ ಭೇಟಿ:** ವಿಷಯ ತಿಳಿಯುತ್ತಿದ್ದಂತೆಯೇ ತಕ್ಷಣ ಸ್ಪಂದಿಸಿದ ಸ್ಥಳೀಯ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಶುಕ್ರವಾರ ಬಿದರಕುಂದಿ ಗ್ರಾಮದ ಮೃತರ ನಿವಾಸಕ್ಕೆ ಭೇಟಿ ನೀಡಿದರು. ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಅವರು, ಸರ್ಕಾರದ ವತಿಯಿಂದ ಮಂಜೂರಾದ 5 ಲಕ್ಷ ರೂಪಾಯಿ ಪರಿಹಾರ ಧನದ ಚೆಕ್ ಅನ್ನು ಕುಟುಂಬದವರಿಗೆ ಹಸ್ತಾಂತರಿಸಿದರು. ಅಲ್ಲದೆ, ಸಂಕಷ್ಟದ ಸಮಯದಲ್ಲಿ ಸರ್ಕಾರ ಮತ್ತು ತಾವು ವೈಯಕ್ತಿಕವಾಗಿ ಕುಟುಂಬದ ಬೆನ್ನಿಗೆ ಇರುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸರ್ಕಾರದ ಪಂಚಗ್ಯಾರಂಟಿ ಯೋಜನೆಗಳ ಸಮಿತಿಯ ತಾಲೂಕಾ ಅಧ್ಯಕ್ಷ ಶಿವಶಂಕರಗೌಡ ಹಿರೇಗೌಡರ, ಪ್ರಮುಖ ಮುಖಂಡರಾದ



ವೈ.ಎಚ್. ವಿಜಯಕರ, ಕಾಮರಾಜ ಬಿರಾದಾರ ಸೇರಿದಂತೆ ಗ್ರಾಮದ ಹಿರಿಯರು, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳಿಗೆ ಜಾಬ್ ಓರಿಯಂಟೆಡ್ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಆರಂಭ

**ಬೆಳಗಾವಿ ವಾರ್ತೆ ಧಾರವಾಡ:** ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ) ಧಾರವಾಡ ಅವರಿಂದ ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳಿಗೆ ಕರ್ನಾಟಕ ಸರ್ಕಾರ ಮತ್ತು ಂಖಅಖಿಇ ಯಿಂದ ಮಾನ್ಯತೆ ಪಡೆದಿರುವ ಜಾಬ್ ಓರಿಯಂಟೆಡ್ ಮತ್ತು ಪ್ರಾಕ್ಟೀಸ್ ಇಂಟಿಗ್ರೇಟೆಡ್ ಡಿಪ್ಲೋಮಾ ಎಂಜಿನೀಯರಿಂಗ್ ಕೋರ್ಸಗಳ ಪ್ರವೇಶ ಆರಂಭವಾಗಿದೆ.

ಡಿಪ್ಲೊಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್ (3+1 ವರ್ಷ ಅವಧಿ), ಡಿಪ್ಲೊಮಾ ಇನ್

ಪ್ರೆಸಿಷನ್ ಮ್ಯಾನುಫ್ಯಾಕ್ಚರಿಂಗ್ (3+1 ವರ್ಷ ಅವಧಿ), ಡಿಪ್ಲೊಮಾ ಇನ್ ಇಲೆಕ್ಟ್ರಾನಿಕ್ಸ್ ಆ್ಯಂಡ್ ಕಮ್ಯೂನಿಕೇಶನ್ (3+1 ವರ್ಷ ಅವಧಿ), ಟೂಲ್ ರೂಮ್ ಮಶಿನಿಷ್ಟ್ (1 ವರ್ಷ ಅವಧಿ) ಕೋರ್ಸ್‌ಗಳು ಲಭ್ಯವಿರುತ್ತವೆ.

ಸರ್ಕಾರದ ವತಿಯಿಂದ ವಿದ್ಯಾರ್ಥಿ ವೇತನದ (ಸ್ಕಾಲರ್‌ಶಿಪ್) ಸೌಲಭ್ಯವಿರುತ್ತದೆ. ಹಾಗೂ ನಾಲ್ಕನೇಯ ವರ್ಷದ ತರಬೇತಿಯಲ್ಲಿ ಪ್ರತಿ ವಿದ್ಯಾರ್ಥಿಗೆ ಮಾಸಿಕ ರೂ.20,000 ರಿಂದ 25000 ಸ್ಟೈಫಂಡ್ ನೀಡಲಾಗುವುದು. ತರಬೇತಿ ನಂತರ ಇಂಜಿನಿಯರಿಂಗ್ ಮಾಡಲು 2ನೇ ವರ್ಷಕ್ಕೆ ನೇರ ಪ್ರವೇಶ ಪಡೆಯಬಹುದಾಗಿದೆ.

ಕೋರ್ಸ್‌ಗಳಿಗೆ ಸೇರಬಯಸುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ತರಬೇತಿ ಕೇಂದ್ರದಿಂದ ಅರ್ಜಿ ಫಾರ್ಮಗಳನ್ನು ಪಡೆಯಬಹುದು. ಹಾಗೂ ಹೆಚ್ಚಿನ ಮಾಹಿತಿಗಾಗಿ ಧಾರವಾಡ ರಾಯಾಪೂರ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶ ಪ್ಲಾಟ್ ಸಂಖ್ಯೆ 38 ರಿಂದ 45, ಮೊದಲನೇ ಹಂತ. ದೂರವಾಣಿ ಸಂಖ್ಯೆ 0836–2970211, 9187670211 ಅವರನ್ನು ಸಂಪರ್ಕಿಸಬೇಕು ಎಂದು ಜಿ.ಟಿ.ಟಿ.ಸಿ ಪ್ರಾಂಶುಪಾಲ ಶಿವಾನಂದ ಕುಂಬಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯಕ್ಕೆ ಅಕ್ಕಡಿ ಕಾಳು ಸೇವನೆ ಅಗತ್ಯ
# ತೊಗರಿಯಲ್ಲಿ ಉತ್ಪಾದನಾ ತಾಂತ್ರಿಕತೆಗಳ ಕಾರ್ಯಾಗಾರ

**ಬೆಳಗಾವಿ ವಾರ್ತೆ ವಿಜಯಪುರ:** ಆಹಾರ ಪದ್ಧತಿಯಲ್ಲಿ ದ್ವಿದಳ ಧಾನ್ಯಗಳಿಗೆ ಅಗ್ರಸ್ಥಾನವಿದೆ. ಅಕ್ಕಡಿ ಕಾಳಿಲ್ಲದ ಊಟಿಲ್ಲ, ಅಷ್ಟರ ಮಟ್ಟಿಗೆ ತೊಗರಿಯೂ ನಮ್ಮ ನಿತ್ಯದ ಜೀವನದಲ್ಲಿ ಹಾಸುಹೊಕ್ಕಾಗಿದೆ. ಅವು ನಮ್ಮ ಜೀವನಕ್ಕೆ ಬೇಕಾದ ಪೋಷಕಾಂಶ ನೀಡುತ್ತವೆ ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಪಿ.ಎಲ್ ಪಾಟೀಲ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಧಾರವಾಡ ಕೃಷಿ ವಿಶ್ವವಿದ್ಯಾಲಯ, ವಿಜಯಪುರದ ಕೃಷಿ ತಂತ್ರಜ್ಞರ ಸಂಸ್ಥೆ, ಮತ್ತು ಜಿಲ್ಲಾ ಕೃಷಿಕ ಸಮಾಜದ ಸಹಯೋಗದಲ್ಲಿ ಹಿಟ್ನಳ್ಳಿ ಕೃಷಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ತೊಗರಿ ಬೆಳೆಯಲ್ಲಿ ಉತ್ಪಾದನಾ ತಾಂತ್ರಿಕತೆಗಳ ಕಾರ್ಯಾಗಾರ-2026 ಉದ್ದೇಶಿಸಿ ಅವರು ಮಾತನಾಡಿದರು.

ಬೇಳೆ ಕಾಳುಗಳಲ್ಲಿ ಸಾಕಷ್ಟು ಪೌಷ್ಟಿಕಾಂಶಗಳಿವೆ. ಬಹಳಷ್ಟು ವಿಟ್ಯಾಮಿನ್ ಇವೆ. ಊಟದಲ್ಲಿ ಬೇಳೆ ಕಾಳುಗಳ ಅಗತ್ಯವಿದೆ. ಆರೋಗ್ಯವಂತರಾಗಲು ಅಕಡಿ ಕಾಳು ತಿನ್ನಬೇಕು. ರಕ್ತ ಚಲನವಲನಕ್ಕೆ, ಹೃದಯ ಸಂಬಂಧಿ ಕಾಯಿಲೆಗಳ ನಿಯಂತ್ರಣಕ್ಕೂ ಬೇಳೆ ಕಾಳು ಬೇಕು ಎಂದರು.

ಆಹಾರ ಪದ್ಧತಿ ಹಾಗೂ ಜೀವನ ಶೈಲಿಯಲ್ಲಿ ಬದಲಾವಣೆ ಮಾಡಿಕೊಂಡು ಆರೋಗ್ಯಯುತ ಜೀವನ ರೂಢಿಸಿಕೊಳ್ಳಬೇಕು. ಬೇಳೆ ಕಾಳುಗಳಿಂದ ಅಜೀರ್ಣತೆ ಆಗುವುದಿಲ್ಲ. ರೋಗ ನಿರೋಧಕ ಶಕ್ತಿ ಹೆಚ್ಚುತ್ತದೆ ಎಂದರು.

ಬೇಳೆ ಕಾಳುಗಳು ಕೃಷಿಗೆ ಮುಖ್ಯವಾಗಿ ಪರಿಸರ ಸ್ನೇಹಿ ಬೆಳೆಗಳಾಗಿವೆ. ಹಾಗಾಗಿ ಅಕ್ಕಡಿಕಾಳುಗಳನ್ನು ಯಥೇಚ್ಛವಾಗಿ ಬೆಳೆಯಬೇಕು. ರಾಜ್ಯದಲ್ಲಿ ವಿಜಯಪುರ ಮತ್ತು ಕಲಬುರಗಿ ಜಿಲ್ಲೆಯಲ್ಲಿ ತೊಗರಿಯನ್ನು ಅತ್ಯಧಿಕ ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ. ಹಾಗಾಗಿ ತೊಗರಿ ಬಿತ್ತನೆಯಲ್ಲಿ ವಿಶೇಷ ತಾಂತ್ರಿಕತೆ ಅಳವಡಿಸಿಕೊಂಡು ಬೇಳೆ ಹಾಗೂ ಎಣ್ಣೆಕಾಳು ಬೆಳೆದು ಸ್ವಾವಲಂಬಿ ಜೀವನ ಸಾಧಿಸಬಹುದಾಗಿದೆ ಎಂದರು.

ತೊಗರಿ ಬೆಳೆಯಲ್ಲಿ ಅಂತರ ಬೆಳೆಯನ್ನು ಬೆಳೆಯಬೇಕು. ಒಟ್ಟಾರೆ ಬೇಳೆ




ಕಾಳುಗಳ ಉತ್ಪಾದನೆ ಜಾಸ್ತಿಯಾಗಬೇಕು ಎಂದರು.

ನೀರಿನ ಮಹತ್ವ ತಿಳಿದು ಮಳೆ ನೀರನ್ನು ಹಿಡಿದಿಟ್ಟುಕೊಂಡು ನೀರಿನ ಸದ್ಬಳಕೆ ಮಾಡಿಕೊಳ್ಳಬೇಕು. ಮುಂಗಾರು ಅನಿಶ್ಚಿತತೆ ಹಿನ್ನೆಲೆಯ ನೀರಿನ ಸಂರಕ್ಷಣೆ ಮಾಡಿದರೆ ಮಣ್ಣಿನ ಸಂರಕ್ಷಣೆ ಮಾಡಿದಂತಾಗುವುದು.

ಮಣ್ಣು ಮತ್ತು ನೀರಿನ ಸಂರಕ್ಷಣೆ ಬಹಳ ಮುಖ್ಯವಾಗಿದೆ. ಹಾಗಾಗಿ ಭೂಮಿಗೆ ಸಾವಯವ ಗೊಬ್ಬರ ಬಳಸಿ ಭೂಮಿಯ ಫಲವತ್ತತೆ ಕಾಯ್ದು ಕೊಳ್ಳಬೇಕು ಎಂದು ರೈತರಿಗೆ ಸಲಹೆ ನೀಡಿದರು. ಉಪ ಕಸುಬನ್ನು ಒಳಗೊಳ್ಳಬೇಕು. ದನಕರುಗಳು ಮನೆಯಲ್ಲಿ ಇರಬೇಕು. ನಮ್ಮ ಭೂಮಿಯ ತಳ ಕಸುವಿಗಾಗಿ ಸಾಕಷ್ಟು ಸಾವಯವ ಗೊಬ್ಬರ ಬಳಕೆ ಮಾಡಬೇಕು ಎಂದು ಹೇಳಿದರು.

ವಿಜಯಪುರ ರೈತರು ಶ್ರಮ ಜೀವಿಗಳು. ಮಡ್ಡಿ ಜಮೀನಿನಲ್ಲಿ ಬಂಗಾರ ಬೆಳೆಯುವವರು ಎಂದು ಜಿಲ್ಲೆಯ ರೈತರನ್ನು ಇದೇ ವೇಳೆ ಕೊಂಡಾಡಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿ ಅತಿ ಹೆಚ್ಚು ತೊಗರಿ ಬೆಳೆ ಬೆಳೆಯಲಾಗುತ್ತಿದೆ. ಮೊದಲ ಐದು ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ಶೇ. 60ರಷ್ಟು ರೈತರು ತೊಗರಿ ಬೆಳೆಯುತ್ತಿದ್ದಾರೆ. ವಾತಾವರಣಕ್ಕೆ ಹೊಂದಿಕೊಂಡು ಎಕರೆಗೆ ಒಂದು ಕ್ವಿಂಟಾಲ್ ಹೆಚ್ಚುವರಿಯಾಗಿ ಇಳುವರಿ ಬರುವಂತೆ ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿಕೊಂಡು ತಮ್ಮ ಆದಾಯ ಹೆಚ್ಚಿಸಿಕೊಳ್ಳಲು ಈ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದರು.

ಬೀಜೋಪಚಾರ ಮಾಡಲೇಬೇಕು. ಬಿತ್ತನೆ ಪೂರ್ವ ಇದು ಕಡ್ಡಾಯ. ಇದು ಮನನ ಮಾಡಬೇಕು. ಅದೇ ಜಮೀನಿನಲ್ಲಿ ಬೆಳೆಯುವುದರಿಂದ ರೋಗಬಾಧೆ ತಡೆಗಟ್ಟಲು ಇದು ಕಡ್ಡಾಯವಾಗಿದೆ ಎಂದ ಅವರು, ತೊಗರಿ ಇಳುವರಿ ಹೆಚ್ಚಿಸುವ ಕಾರ್ಯತಂತ್ರಗಳ ಕುರಿತು ಅರಿತುಕೊಳ್ಳಬೇಕು ಎಂದರು.

ಎರಡನೇ ಸೂತ್ರ ಮಣ್ಣಿನ ಫಲವತ್ತತೆ ಆಧಾರದ ಮೇಲೆ ಅಗಲ ಸಾಲು ಬಿತ್ತನೆಗೆ ಪ್ರೋತ್ಸಾಹ ನೀಡುವುದು. ಭೂಮಿಯ ಫಲವತ್ತತೆ ರೈತ ತಿಳಿದುಕೊಳ್ಳಬೇಕು.

ತೊಗರಿ ಬೆಳೆಯಲ್ಲಿ ಸೂರ್ಯಕಾಂತಿ, ಸಜ್ಜೆ ಮೆಕ್ಕೆಜೋಳ, ಹೆಸರು, ಶೇಂಗಾ ಹಾಗೂ ಉದ್ದು ಬೆಳೆಗಳನ್ನು ಅಂತರ ಬೆಳೆಯನ್ನಾಗಿ ಬೆಳೆಯಬೇಕು. ಪ್ರಸಕ್ತ ವರ್ಷದ ಮುಂಗಾರಿನಲ್ಲಿ 5000 ಹೆ.ಪ್ರದೇಶದಲ್ಲಿ ಅಂತರ ಬೆಳೆಯನ್ನಾಗಿ ಬೆಳೆಯಲು ಯೋಜಿಸಲಾಗಿದೆ ಎಂದರು.

ಕುಡಿ ಚಿವುಟುವ ಕಾರ್ಯಕ್ಕೆ ಉತ್ತೇಜನ ನೀಡುವ ದೂರದೃಷ್ಟಿಯಿಂದ ಬಿತ್ತಿದ 45-50 ದಿನಗಳಲ್ಲಿ ಮಾಡಬೇಕು. ಹಾಗಾದಾಗ ಹೆಚ್ಚಿನ ಕವಲು ಒಡೆಯಲು ಸಹಕಾರಿಯಾಗುವುತ್ತದೆ. ಇದರಿಂದ ಹೆಚ್ಚಿನ ಹೂವು ಹಾಗೂ ಕಾಯಿ ಬಿಡಲು ಅನುಕೂಲವಾಗುತ್ತದೆ ಎಂದರು.

ತೊಗರಿ ಬೆಳೆಯ ಕ್ಷೇತ್ರ ಹೆಚ್ಚಿಸುವ ಕಾರ್ಯತಂತ್ರಗಳಾದ ತೊಗರಿ ಬೆಳೆಯಲ್ಲಿ ತೊಗರಿ ಬೆಳೆಯನ್ನೇ ಕಾವಲು ಬೆಳೆಯನ್ನಾಗಿ ಬೆಳೆದರೆ ಕೀಟ ಬಾಧೆಯಿಂದ ಮುಕ್ತಿ ಹೊಂದಬಹುದು ಎಂದರು.

ಸಾಧ್ಯವಿದ್ದಲ್ಲಿ ನ್ಯಾನೋ ಯೂರಿಯಾ, ನ್ಯಾನೋ ಡಿಎಪಿ ಪಲ್ಸ ಮ್ಯಾಜಿಕ್ ಹಾಗೂ ಪಲ್ಸ್ ಬೂಸ್ಟರ್ ಇತ್ಯಾದಿಗಳ ಬಳಕೆ ಮಾಡುವುದರಿಂದ ಹೆಚ್ಚಿನ ಹೂ ಹಾಗೂ ಕಾಯಿಕಟ್ಟಲು ಅನುಕೂಲವಾಗುತ್ತದೆ ಎಂದ ಅವರು, ಜೊತೆಗೆ ಅವಶ್ಯಕತೆಯನು ಸಾರ ಔಷಧಿ ಸಿಂಪರಣೆ ಮಾಡಬೇಕು ಎಂದರು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಶೇ ನೂರರಷ್ಟು ತೊಗರಿಯನ್ನು ಖರೀದಿ ಕೇಂದ್ರಗಳ ಮೂಲಕ ಖರೀದಿಸಲಾಗುತ್ತಿದೆ. 8,450 ರೂ. ಪ್ರತಿ ಕ್ವಿಂಟಲ್ ಸರ್ಕಾರ ಖರೀದಿಸಲಾಗುತ್ತಿದೆ. ರೈತರಿಗೆ ಅನುಕೂಲ ಕಲ್ಪಿಸಲಾಗಿದೆ ಎಂದರು.

ಅತ್ಯಧಿಕ ತೊಗರಿ ಇಳುವರಿಗೆ ಪ್ರತಿಯೊಬ್ಬ ರೈತರು ಮಾಗಿ ಉಳುಮೆ ಮಾಡಿಯೇ ಜಮೀನಿಗೆ ತೊಗರಿ ಬಿತ್ತನೆ ಮಾಡಬೇಕು. ಮಾಗಿ ಉಳುಮೆ ಮಾಡುವುದರಿಂದ ಭೂಮಿಯಲ್ಲಿರುವ ಕೀಟಗಳು ಹೊರಗೆ ಬರುತ್ತವೆ. ಅವುಗಳನ್ನು ಪಕ್ಷಿಗಳು ತಿನ್ನುತ್ತವೆ. ಇದರಿಂದ ಬೆಳೆದ ಬೆಲೆಗೆ ಕೀಟ ಬಾಧೆಯಾಗುವುದಿಲ್ಲ. ಹಾಗಾಗಿ ರೈತರು ಮಾಗಿ ಉಳುಮೆ ಕೈಗೊಳ್ಳಬೇಕು ಎಂದರು.

ನಾಗಠಾಣ ಹೋಬಳಿಯ ಗೂಗದಡ್ಡಿಯ ಪ್ರಗತಿಪರ ರೈತ ಸುರೇಶ ಮಾಗಿ ಮಾತನಾಡಿ, ಪ್ರತಿಯೊಬ್ಬ ರೈತರು ಹನಿ ನೀರಾವರಿ ಪದ್ಧತಿ ಅಳವಡಿಸಿಕೊಳ್ಳಬೇಕು ಎಂದರು. ಬಳಿಕ ರೈತರಿಂದ ಕೇಳಿಬಂದ ಪ್ರಶ್ನೆಗಳಿಗೆ ಸುರೇಶ ಅವರು ಉತ್ತರಿಸಿದರು.

ಬಸವನಬಾಗೇವಾಡಿ ತಾಲೂಕಿನ ಮನಗೂಳಿ ಗ್ರಾಮದ ಆರ್.ಎಂ. ಹೂಗಾರ ಮಾತನಾಡಿ, ತೊಗರಿ ಬೆಳೆಯಲ್ಲಿ ತಾಂತ್ರಿಕತೆ ಕುರಿತು ವಿವರಿಸಿದರು. ಹನಿ ನೀರಾವರಿ ಮಾಡಿದರೆ ಬಹಳ ಅನುಕೂಲವಾಗುತ್ತದೆ ಎಂದರು. ಇದೇ ವೇಳೆ ತಾಂತ್ರಿಕ ಹಸ್ತ ಪ್ರತಿಗಳನ್ನು ಬಿಡುಗಡೆಗೊಳಿಸಲಾಯಿತು.

ರೈತರ ನಾಡಗೀತೆಯೊಂದಿಗೆ ಕಾರ್ಯಕ್ರಮವಾಯಿತು. ಕಾರ್ಯಾಗಾರದಲ್ಲಿ ಹಿಟ್ನಳ್ಳಿ ಕೃಷಿ ಮಹಾವಿದ್ಯಾಲಯದ ವಿಜ್ಞಾನಿಗಳು, ವಿದ್ಯಾರ್ಥಿಗಳು ಹಾಗೂ ರೈತರು ಪಾಲ್ಗೊಂಡಿದ್ದರು.

# ನಾಗಠಾಣದಲ್ಲಿ ಸಂಭ್ರಮದ ಚೌಡೇಶ್ವರಿ ದೇವಿಯ ಜಾತ್ರೆ



**ಬೆಳಗಾವಿ ವಾರ್ತೆ ವಿಜಯಪುರ:** ಬಾದ್ಮಿ ಅಮಾವಾಸ್ಯೆ ನಿಮಿತ್ತ ಶನಿವಾರದಂದು ತಾಲೂಕಿನ ನಾಗಠಾಣ ಗ್ರಾಮದಲ್ಲಿ ಶ್ರೀ ಚೌಡೇಶ್ವರಿ ಜಾತ್ರಾ ಮಹೋತ್ಸವ ಬಹು ವಿಜೃಂಭಣೆಯಿಂದ ಜರುಗಿದ್ದು, ದೇವಿಯ ದರ್ಶನಕ್ಕೆ ಭಕ್ತಸಾಗರವೇ ಹರಿದು ಬಂದಿತ್ತು.

ಶುಕ್ರವಾರ ಸಂಜೆ ಭಕ್ತ ಮಹಿಳೆಯರು ಅಂಬಲಿ ಬಿಂದಿಗೆ ಹೊತ್ತು, ಬಾಸಿಂಗ, ಕಳಸದ ಮೆರವಣಿಗೆಯು ಗುಡಿ ತಲುಪಿ, ಅಲ್ಲಿ ಎಲ್ಲರೂ ಅಂಬಲಿ ಅರ್ಪಿಸಿ, ಪುನೀತರಾದರು.

ಚೌಡೇಶ್ವರಿ ದೇವಿಯ ಮುಖವಾಡ ಹೊತ್ತವರು ಅಪಾರ ಸಂಖ್ಯೆಯ ಭಕ್ತರು, ಬಾಜಾ-ಭಜಂತ್ರಿ, ಡೊಳ್ಳು ವಾದ್ಯಗಳು ಹಾಗೂ ಭಕ್ತರ ಜಯಘೋಷಗಳೊಂದಿಗೆ ಇಡೀ ಗ್ರಾಮದ ಭಕ್ತರ ಮನೆ ಮನೆಗೆ ಭೇಟಿ ನೀಡಿ,ಕಾಯಿ-ಕರ್ಪೂರದೊಂದಿಗೆ ನೈವೇದ್ಯ ಸ್ವೀಕರಿಸಿ, ಉಡಿ ತುಂಬಿಕೊಂಡು ಆಶೀರ್ವದಿಸುವ ದೃಶ್ಯ ವಿಶೇಷವಾಗಿತ್ತು. ಮೆರವಣಿಗೆಯಲ್ಲಿ ಮಹಿಳೆಯರು ಆರತಿ ಬೆಳಗಿ ಭಕ್ತಿಭಾವ ವ್ಯಕ್ತಪಡಿಸಿದರೆ, ಯುವಕರು ವಾದ್ಯಗಳೊಂದಿಗೆ ಉತ್ಸವದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದರು. ಕುಂಬಾರ ಮನೆತನದ ಮಹಿಳೆಯರು ಬಜಾರಕ್ಕೆ ಗುಡಿಯಿಂದ ಕಿಚಡಿ ತರುವರು. ಅಲ್ಲಿ ಚೌಡೇಶ್ವರಿಯು ಔಡಲ ಕಟ್ಟಿಗೆಯ ಹಂದರದಲ್ಲಿ ಮಜ್ಜಿಗೆ ಕಡಿಯುವಳು. ತದನಂತರ ಅಲ್ಲಿಂದ ಕುಣಿಯುತ್ತಾ ಗುಡಿಗೆ ಮರಳಿ ಬರುವದು ಪ್ರತಿವರ್ಷದ ಸಂಪ್ರದಾಯವಾಗಿದೆ.


ಚೌಡೇಶ್ವರಿಯು ಅತ್ಯಂತ ಶಕ್ತಿಶಾಲಿ ದೇವತೆಗಳಲ್ಲಿ ಒಬ್ಬಳಾಗಿದ್ದು, ಈಕೆಯ ಬಳಿ ಏನೇ ಬೇಡಿಕೊಂಡರೂ ಅದು ಈಡೇರುತ್ತದೆ ಎನ್ನುವ ನಂಬಿಕೆ ನಾಗಠಾಣ ಗ್ರಾಮದ ಭಕ್ತರಲ್ಲಿ ಈಗಲೂ ಜನಜನಿತವಾಗಿದೆ.

ಕುಂಬಾರ ಮನೆತನದ ಭೀಮರಾಯ, ಅಮೋಘಸಿದ್ದ, ಪವಾಡೇಶ, ಶಿವಾನಂದ, ಅಮೋಘಸಿದ್ದ, ಮಲ್ಲು, ಶರಣು, ಸೋಮನಿಂಗ, ಶ್ರೀಶೈಲ, ಸಿದ್ದು, ಪುಂಡಲೀಕ, ವಿಠಲ, ಗಿರಮಲ್ಲ, ಚವಡಪ್ಪ, ಅರವಿಂದ ಸೇರಿದಂತೆ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

# ಮಸಣವಾಟ ಜಮೀನು : ಆಕ್ಷೇಪಣೆ ಸಲ್ಲಿಕೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಬನಹಟ್ಟಿ ಗ್ರಾಮದ ಸ.ನಂ.12/1ರಲ್ಲಿನ 11.14 ಎಕರೆ ವಿಸ್ತೀರ್ಣ ಪೈಕಿ 3.25 ಎಕರೆ ಸಾರ್ವಜನಿಕರ ಉಪಯೋಗಕ್ಕೆ ಸಗತ್ಯವಿಲ್ಲವೆಂದು ಮತ್ತು ಸಾರ್ವಜನಿಕ ಮಸಣವಾಟ ಜಮೀನಿನ ಭಾಗದಲ್ಲಿ ಸಾರ್ವಜನಿಕರು ಹಾಗೂ ಎಲ್ಲ ವ್ಯಕ್ತಿಗಳ ಹಕ್ಕುಳು ಕೊನೆಗೊಳ್ಳತಕ್ಕದ್ದೆಂದು ಜಿಲ್ಲಾಧಿಕಾರಿಗಳು 94ನೇ ನಿಯಮದ 68(1)ನೇ ಪ್ರಕರಣದ ಮೇರೆಗೆ ಘೋಷಿಸಿದ್ದಾರೆ. ಇದರ ಮೇಲೆ ಆಕ್ಷೇಪಣೆಗಳು ಇದ್ದಲ್ಲಿ ಅಧಿಸೂಚನೆ ಹೊರಡಿಸಿದ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ರಾಜಕಾಲುವೆ ಹೂಳೆತ್ತುವಲ್ಲಿ ಘೋರ ನಿರ್ಲಕ್ಷ್ಯ
# ಇಂದು ನಗರಸಭೆ ಮುಂದೆ ಪ್ರತಿಭಟನಾ ಧರಣಿಗೆ ನಿರ್ಧಾರ




**ಬೆಳಗಾವಿ ವಾರ್ತೆ ಕೊಪ್ಪಳ :** ನಗರದ ರಾಜಕಾಲುವೆ ಆಕ್ರಮಿಸಿಕೊಂಡು ಕಟ್ಟಿದ ಕಟ್ಟಡಗಳನ್ನು ತೆರೆವುಗೊಳಿಸಿ ಹೂಳೆತ್ತುವಲ್ಲಿ ನಗರಸಭೆಯ ಘೋರ ನಿರ್ಲಕ್ಷ್ಯ ವಹಿಸಿದ್ದನ್ನು ಖಂಡಿಸಿ ಮೇ 18 ರಂದು ಸೋಮವಾರ 'ಜನಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ವಿವಿಧ' ಸಂಘಟನೆಗಳಿಂದ ನಗರಸಭೆ ಮುಂದೆ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ಜನಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೊಪ್ಪಳ ನಗರದ ರಾಜಕಾಲುವೆಯಲ್ಲಿ ಹೂಳು ತುಂಬಿಕೊಂಡಿದ್ದ ಬಗ್ಗೆ ಕಳೆದ ಮೇ 4, 2026 ರ ಸೋಮವಾರದಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಮುಂಗಾರು ಮಳೆ ಆರಂಭವಾಗುವ ಮುನ್ನವೇ ರಾಜಕಾಲುವೆ ಸ್ವಚ್ಛಗೊಳಿಸುವಂತೆ ಆಗ್ರಹಿಸಲಾಗಿತ್ತು.

ಮಳೆಗಾಲದಲ್ಲಿ ಎದುರಾಗಬಹುದಾದ ಅನಾಹುತಗಳ ಬಗ್ಗೆ ಮುನ್ನೆಚ್ಚರಿಕೆ ನೀಡಿದರೂ ನಗರಸಭೆ ಮತ್ತು ಜಿಲ್ಲಾಡಳಿತ ಕಣ್ಣು ಮುಚ್ಚಿ ಕುಳಿತಿವೆ.

ಈ ಮೊಂಡುತನದ ಧೋರಣೆಯನ್ನು ಖಂಡಿಸಿ ರಾಜಕಾಲುವೆ ಅಕ್ಕಪಕ್ಕದ ಮನೆಗಳಿಗೆ ನೀರು ನುಗ್ಗಿ ಸಾರ್ವಜನಿಕರ ಆಸ್ತಿಪಾಸ್ತಿಗೆ ಹಾನಿಯಾದರೆ ಅದಕ್ಕೆ ನಗರಸಭೆಯೇ ನೇರ ಹೊಣೆ ಎಂದು ಎಚ್ಚರಿಸಲಾಗಿತ್ತು. ಆದರೆ, ಹನ್ನೆರಡು ದಿನಗಳು ಕಳೆದರೂ ಅಧಿಕಾರಿಗಳು ಕಿಂಚಿತ್ತೂ ಗಮನಹರಿಸದೆ ಇರುವುದು ಸಾರ್ವಜನಿಕರ ಹಿತಾಸಕ್ತಿಯನ್ನು ಗಾಳಿಗೆ ತೂರಿದಂತಿದೆ ಎಂದು ಸಭೆಯಲ್ಲಿ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

**ಸಭೆಯ ಪ್ರಮುಖ ಆಗ್ರಹಗಳು:**

ಕೂಡಲೇ ಯುದ್ಧೋಪಾದಿಯಲ್ಲಿ ಆಕ್ರಮಿಸಿಕೊಂಡು ಕಟ್ಟಿದ ಕಟ್ಟಡಗಳನ್ನು ತೆರೆವುಗೊಳಿಸಿ ರಾಜಕಾಲುವೆಯಲ್ಲಿಯ ಮತ್ತು ನಗರದ ಎಲ್ಲಾ ಬಡಾವಣೆಗಳ ಚರಂಡಿಗಳಲ್ಲಿಯ ಗಿಡಗಂಟಿಗಳು. ಪ್ಲಾಸ್ಟಿಕ್ ತ್ಯಾಜ್ಯಗಳ ಹೂಳೆತ್ತುವ ಕಾರ್ಯ ಆರಂಭಿಸಬೇಕು. ಮಳೆಗಾಲದಲ್ಲಿ ಸಾರ್ವಜನಿಕರ ಮನೆಗಳಿಗೆ ರಾಜಕಾಲುವೆ ನೀರು ನುಗ್ಗದಂತೆ ತಡೆಗೋಡೆ ಅಥವಾ ಅಗತ್ಯ ಕ್ರಮ ಕೈಗೊಳ್ಳಬೇಕು. ನಗರದ ರಾಜಕಾಲುವೆ ಮತ್ತು ವಾರ್ಡಗಳ ಚರಂಡಿಗಳ ಹೂಳು ಎತ್ತುವಲ್ಲಿ ವಿಳಂಬ ಮಾಡುತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಬೇಕು. ನಗರಸಭೆಯ ನಿರ್ಲಕ್ಷ್ಯದಿಂದಾಗಿ ಮಳೆ ಬಂದಾಗ ಜನರ ಬದುಕು ಬೀದಿಗೆ ಬರುವಂತಾಗಿದೆ. ಮನವಿಗಳಿಗೆ ಬೆಲೆ ಇಲ್ಲದ ಮೇಲೆ ಬೀದಿಗಿಳಿದು ಹೋರಾಡುವುದು ಅನಿವಾರ್ಯ.ಈ ಹೋರಾಟ ಕೇವಲ ಸಾಂಕೇತಿಕವಾಗಿದ್ದು.ಇದೇ ಧೋರಣೆ ಮುಂದುವರೆದರೆ ಬೃಹತ್ ಹೋರಾಟ ಅನಿವಾರ್ಯವಾಗುತ್ತದೆ ಎಂದೂ ಸಭೆಯಲ್ಲಿ ಮುಖಂಡರು ಅಭಿಪ್ರಾಯ ಪಟ್ಟರು.

ಮುಖಂಡರು ಮಾತನಾಡಿ ದಿ.18 ಮೇ 2026, ಸೋಮವಾರ ಬೆಳಿಗ್ಗೆ 11ಗಂಟೆಗೆ. ನಗರಸಭೆ ಕಾರ್ಯಾಲಯದ ಮುಂದೆ ಸಾಂಕೇತಿಕ ಧರಣಿ ನಡೆಯಲಿದ್ದು.ವಿವಿಧ ಪ್ರಗತಿಪರ ಸಂಘಟನೆಗಳು. ನಗರದ ಪ್ರಜ್ಞಾವಂತ ನಾಗರಿಕರು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಈ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಕೋರಿದರು.

ಸಭೆಯಲ್ಲಿ ಜನಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಎಸ್.ಎ.ಗಫಾರ್.ಪ್ರಗತಿಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ಬಸವರಾಜ್ ಶೀಲವಂತರ್. ಪಾಸ್ಟರ್ಸ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣವರ್.ಕರ್ನಾಟಕ ಮಾದಿಗ ರಕ್ಷಣಾ ವೇದಿಕೆ ಜಿಲ್ಲಾ ಅಧ್ಯಕ್ಷ ಮುದುಕಪ್ಪ ಹೊಸಮನಿ.ದಲಿತ ಯುವ ವೇದಿಕೆಯ ಸಂಚಾಲಕ ಸುಂಕಪ್ಪ ಮೀಸಿ.ಭಾರತೀಯ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಸಂಚಾಲಕ ತುಕಾರಾವ್ ಪಾತ್ರೋಟಿ. ದಲಿತ ಸಂಘರ್ಷ ಸಮಿತಿಯ (ದಾದಾ ಸಾಹೇಬ್ ಡಾ: ಎನ್. ಮೂರ್ತಿ ಸ್ಥಾಪಿತ) ರಾಜ್ಯ ಕಾರ್ಯದರ್ಶಿ ರಾಮಣ್ಣ ಕಂದಾರಿ. ರಾಜ್ಯ ಸಮಿತಿಯ ಹಿರಿಯ ಸದಸ್ಯ ಡಾ:ಬಿ.ಜ್ಞಾನ ಸುಂದರ್ ಮುಂತಾದವರು ಭಾಗವಹಿಸಿದ್ದರು.

# ಜನಸ್ನೇಹಿ ಪೊಲೀಸ್ ಸೇವೆಗೆ ಕರವೇ ಶುಭಾಶಯ



**ಬೆಳಗಾವಿ ವಾರ್ತೆ ಗಂಗಾವತಿ :** ಗಂಗಾವತಿ ನಗರ ಪೊಲೀಸ್ ಠಾಣೆಗೆ ನೂತನ ವೃತ್ತ ನಿರೀಕ್ಷಕರಾಗಿ (ಸಿಪಿಐ) ಅಧಿಕಾರ ವಹಿಸಿಕೊಂಡ ಪ್ರಕಾಶ ಆರ್. ಯಾತನೂರು ಅವರನ್ನು ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡರ ಬಣ) ಗಂಗಾವತಿ ತಾಲೂಕು ಘಟಕದ ವತಿಯಿಂದ ಆತ್ಮೀಯವಾಗಿ ಸ್ವಾಗತಿಸಿ ಅಭಿನಂದಿಸಲಾಯಿತು.

ನಗರ ಪೊಲೀಸ್ ಠಾಣೆಯಲ್ಲಿ ಆಯೋಜಿಸಿದ್ದ ಸರಳ ಆದರೆ ಸೌಹಾರ್ದಯುತ ಕಾರ್ಯಕ್ರಮದಲ್ಲಿ ಕರವೇ ಪದಾಧಿಕಾರಿಗಳು ಹೂಗುಚ್ಛ ನೀಡಿ ಗೌರವ ಸಲ್ಲಿಸಿದರು.

ಈ ವೇಳೆ ಮಾತನಾಡಿದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಗಿಣಿಮೋತಿ ಸಾರ್ವಜನಿಕರೊಂದಿಗೆ ಸ್ನೇಹಪರವಾಗಿ ನಡೆದುಕೊಳ್ಳುವ ಪೊಲೀಸ್ ವ್ಯವಸ್ಥೆ ಸಮಾಜದ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

]ನೂತನ ಸಿಪಿಐ ಪ್ರಕಾಶ ಆರ್. ಯಾತನೂರು ಅವರು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ, ಕಾನೂನು ಸುವ್ಯವಸ್ಥೆ ಕಾಪಾಡುವ ಜೊತೆಗೆ ಜನರ ವಿಶ್ವಾಸ ಗಳಿಸುವ ದಕ್ಷ ಅಧಿಕಾರಿಯಾಗಿ ಉತ್ತಮ ಸೇವೆ ಸಲ್ಲಿಸಲಿ ಎಂದು ಶುಭ ಹಾರೈಸಿದರು. ಈ ಸಂಧರ್ಭದಲ್ಲಿ, ನಗರ ಕಾರ್ಯದರ್ಶಿ ಅಂಜಿನಿ ಗೊರೂರು, ಮಂಜುನಾಥ ಕಾಯಗಡ್ಡಿ, ಸಂಘಟನಾ ಕಾರ್ಯದರ್ಶಿಗಳಾದ ಪ್ರವೀಣ್ ಕುಮಾರ, ರಮೇಶ್ ಗಿಣಿಮೋತಿ, ಕಾರ್ಯಕಾರಿಣಿ ಸದಸ್ಯ ಮಂಜು ಕಾಳಿ ಸೇರಿದಂತೆ ಹಲವಾರು ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬಲ್ಡೋಟ ತೊಲಗಿಸಲು 200ನೇ ದಿನದ ಹೋರಾಟದ ಆಟೋ ಪ್ರಚಾರಕ್ಕೆ ಚಾಲನೆ
# ಪ್ರಜ್ಞಾವಂತರು, ಸಾಮಾಜಿಕ, ರಾಜಕೀಯ ಹೊಣೆ ಹೊತ್ತವರು ಮಾಲಿನ್ಯದ ವಿರುದ್ಧ ಬೀದಿಗಿಳಿಯಲಿ : ಮಂಜುನಾಥ ಗೊಂಡಬಾಳ

**ಬೆಳಗಾವಿ ವಾರ್ತೆ ಕೊಪ್ಪಳ:** ಬಲ್ಡೋಟ ಇಲ್ಲಿಂದ ತೊಲಗಿದರೆ ಮಾತ್ರ ಕೊಪ್ಪಳ-ಭಾಗ್ಯನಗರಕ್ಕೆ ಭವಿಷ್ಯ. ಇಲ್ಲದಿದ್ದರೆ ಒಂದೂವರೆ ಲಕ್ಷ ಜನರು ಅನಾರೋಗ್ಯದ ದುಷ್ಪರಿಣಾಮ ಎದುರಿಸಬೇಕಾಗುತ್ತದೆ.

ಅನುಮಾನ ಇದ್ದವರು ಪಕ್ಕದ ಜಿಂದಾಲಿಗೆ ಹೋಗಿ ನೋಡಿ ಬನ್ನಿ ಎಂದು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಸಂಚಾಲಕ ಮಂಜುನಾಥ ಜಿ. ಗೊಂಡಬಾಳ ಆತಂಕ ವ್ಯಕ್ತಪಡಿಸಿದರು.

ಇದೇ 18.05.2026ರಂದು ಸೋಮವಾರ ನಗರಸಭೆ ಮುಂದೆ ಅವಳಿ ನಗರದ ಜನರ ಆರೋಗ್ಯ ಹಾನಿ ಮಾಡಲು ವಿಸ್ತರಣೆ ಬಯಸಿ ಬರುತ್ತಿರುವ




ಬಲ್ಡೋಟ ಕಾರ್ಖಾನೆ ಬಂದ್ ಆಗಬೇಕು. ಇಲ್ಲಿನ ಜನಪ್ರತಿನಿಧಿಗಳು ಜನರ ಪರವಾಗಿ ಇದ್ದಾರೆ ಎಂಬ ಭರವಸೆ ಇದೆ, ಅದು ಕೂಡಲೇ ಈಡೇರಬೇಕಿದೆ, ಜಿಲ್ಲಾ ಕೇಂದ್ರಕ್ಕೆ ಹೊಂದಿಕೊಂಡು 2011ರಿಂದ ಬಲ್ಡೋಟ ಎಂಎಸ್ಪಿಎಲ್ ಪೆಲ್ಲೆಟ್ ಘಟಕದಿಂದ ಅರ್ಧ ಊರು ಮಾಲಿನ್ಯ ಬಾಧಿವಾಗುತ್ತಿದ್ದು, ನಗರದ ಜನರ ಆರೋಗ್ಯದ ದುಷ್ಪರಿಣಾಮ ತಡೆಯಲು ಈ ಘಟಕ ಬಂದ್ ಮಾಡಿ, ಜನರ ಆರೋಗ್ಯ ಖಾತ್ರಿಪಡಿಸಸಬೇಕು.

ಬಲ್ಡೋಟ ಕಂಪನಿಯು ಬಸಾಪುರ ಗ್ರಾಮದ ಕೆರೆಯನ್ನು ಅನಧಿಕೃತವಾಗಿ ಮಂಜೂರಿ ಹೆಸರಿನಲ್ಲಿ ವಶಪಡಿಸಿಕೊಂಡಿದ್ದು ಸುತ್ತಲಿನ ಸಾವಿರಾರು ಜಾನುವಾರುಗಳ ನೀರಿನ ಅಭಾವವಾಗಿದೆ.

ಕಂಪನಿ ಹಾಕಿದ ಕಾಂಪೌಂಡ್ ತೆರವು ಮಾಡಿ ಜಾನುವಾರು ನೀರು ಕುಡಿಯಲು ಅವಕಾಶ ಮಾಡಿಕೊಡಬೇಕು. ತುಂಗಭದ್ರ ನೀರು ವಿಷಗೊಳಿಸುತ್ತಿರುವ ಮಾಲಿನ್ಯಕಾರಿ ಕಾರ್ಖಾನೆಗಳನ್ನು ಮುಚ್ಚಬೇಕು. ಹಿರೇಬಗನಾಳ, ಅಲ್ಲಾನಗರ ಪಕ್ಕದ ಸ್ಪಾಂಜ್ ಐರನ್ ಕಾರ್ಖಾನೆಗಳನ್ನು ಕೇಂದ್ರ ಪರಿಸರ ಇಲಾಖೆ ವರದಿಯ ಶಿಫಾರಸಿನಂತೆ ನಿರ್ಜನ ಪ್ರದೇಶಕ್ಕೆ ಸ್ಥಳಾಂತರಿಸಬೇಕು.

ಸರ್ಕಾರ ಕಾರ್ಖಾನೆ ಧೂಳು ಬಾಧಿತ 22 ಹಳ್ಳಿಗಳ ಪುನರುಜ್ಜೀವನ ಮಾಡಲು ವಿಶೇಷ ಪ್ಯಾಕೇಜ್ ಘೋಷಿಸಬೇಕು. ಎ.ಐ.ಐ.ಎಂ.ಎಸ್ ಸಂಸ್ಥೆ ಮತ್ತು ಐ.ಐ.ಎಸ್.ಸಿ ಸಂಸ್ಥೆಯಿಂದ ಜನರ ಆರೋಗ್ಯ ಮತ್ತು ಪರಿಸರ ಹಾನಿಯ ಸಮೀಕ್ಷೆ ನಡೆಸಬೇಕು ಎಂದು ಧರಣಿ ನಡೆಯುತ್ತಿದೆ.

ದಿ.18.05.2026 ಸೋಮವಾರ ಇಲ್ಲಿ ನಡೆಯುತ್ತಿರುವ ಧರಣಿ 200ನೇ ದಿನ ತಲುಪುತ್ತದೆ. ಇದರ ಅಂಗವಾಗಿ ಎರಡು ದಿನಗ ಕಾಲ ಬಾಧಿತ ಗ್ರಾಮಗಳು ಮತ್ತು ಕೊಪ್ಪಳ, ಭಾಗ್ಯನಗರದಲ್ಲಿ ಆಟೋ ಮೂಲಕ ಪ್ರಚಾರ ಮಾಡಿ ಮಾಲಿನ್ಯದ ಕುರಿತು ಜನಜಾಗೃತಿ ಮಾಡಲಾಗುತ್ತಿದೆ.

ಆಟೋ ಪ್ರಚಾರಕ್ಕೆ ಚಾಲನೆ ಕೊಟ್ಟು ಮಾತನಾಡಿದ ಗೊಂಡಬಾಳ ಅವರು "ಇದು ನಗರದ ಪ್ರಜ್ಞಾವಂತರು, ಸಾಮಾಜಿಕ, ರಾಜಕೀಯ ಕ್ಷೇತ್ರದ ಜವಾಬ್ದಾರಿ ಹೊತ್ತವರು ಮುಂದೆ ಬಂದು ಹೋರಾಟಕ್ಕೆ ಹೆಗಲು ಕೊಡಬೇಕು ಎಂದರು.

ತಾಲೂಕಿನ 22 ಹಳ್ಳಿಗಳು ಧೂಳು ಬಾಧಿತವಾಗಿವೆ. ನಗರದ ಜನತೆ ಈ ವಿಷಯದಲ್ಲಿ ಅಸಡ್ಡೆ ತೋರಿದರೆ ಭವಿಷ್ಯದಲ್ಲಿ ಕೊಪ್ಪಳ ಭವಿಷ್ಯ ಉಳಿಯದು. ಬಾಧಿತರಾಗುವ ಜನರು ಮುಂಜಾಗ್ರತೆ ವಹಿಸಿ ಹೋರಾಡೋಣ ಎಂದರು.

ಧರಣಿಯಲ್ಲಿ ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ಎಸ್.ಮಹಾದೇವಪ್ಪ ಮಾವಿನಮಡು, ನಾಗರಾಜ ಕುಷ್ಟಗಿ ಲಾಚನಕೇರಿ, ವಿಜಯಮಹಾಂತೇಶ ಹಟ್ಟಿ, ಮೈಲಾರಪ್ಪ ಅರಳಿಗಿಡದ, ರವಿಕುಮಾರ ಹಣವಾಳ, ಈರಣ್ಣ ಬಡಿಗೇರ, ಶಿವಪ್ಪ ಜಲ್ಲಿ, ಗಂಗಮ್ಮ ಕುರುಗೋಡು ಇದ್ದರು.

# ಪ್ರೊ. ಎಂ ಆರ್ ಕುಂಬಾರ ಅವರ ಜನ್ಮ ಶತಮಾನೋತ್ಸವ ಆಚರಣೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಪ್ರೊ ಎಸ್ ಎಲ್ ಸಂಗಮ ಅವರ ಮನೆಯಲ್ಲಿ. ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ, ಗ್ರಂಥಾಲಯ ವಿಜ್ಞಾನ ವಿಷಯದಲ್ಲಿ ವಿವಿಧ ಕೋರ್ಸ್ ಗಳ ಪ್ರಾರಂಭಕ್ಕೆ ಕಾರಣಿಕರ್ತರಾದ ಪ್ರೊ ಎಂ ಆರ್ ಕುಂಬಾರ ಅವರ ಜನ್ಮ ಶತಮಾನೋತ್ಸವದ ನಿಮಿತ್ ಪ್ರೊ ಎಂ ಆರ್ ಕುಂಬಾರ ಅವರ ಭಾವಚಿತ್ರಕ್ಕೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಮಾಲಾರ್ಪಣೆ ಮಾಡಿ ಗೌರವ ನಮನಗಳನ್ನು ಸಲ್ಲಿಸಿದರು. ಕರ್ನಾಟಕ ವಿಶ್ವವಿದ್ಯಾಲಯ ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದ ನಿವೃತ್ ಪ್ರಾಧ್ಯಾಪಕ ಡಾ. ಎಸ್.ಎಲ್. ಸಂಗಮ ಅವರ 75ನೇ ಜನ್ಮದಿನೋತ್ಸವ ಶುಭ ಸಂದರ್ಭದಲ್ಲಿ, ವಿದ್ಯಾ ಗುರುಗಳಾದ ಪ್ರೊ ಎಸ್.ಎಲ್.ಸಂಗಮ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಶಾಲು, ಮಾಲಾರ್ಪಣೆ ಮಾಡಿ, ಗ್ರಂಥ ನೀಡಿ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಅಭಿನಂದಿಸಿ, ಶುಭ ಕೋರಿದರು. ಹಿರಿಯರಾದ ಶಶಿಕಲಾ ಸಂಗಮ, ವರೂರು ಎಜಿಎಂ ಇಂಜಿನಿಯರಿಂಗ್ ಕಾಲೇಜಿನ ಗ್ರಂಥಪಾಲಕ ಮಾರುತಿ ತಲಗೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಮುಂತಾದವರು ಇದ್ದರು. ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು 30 ವರ್ಷಗಳ ಹಿಂದೆ ಕರ್ನಾಟಕ ವಿಶ್ವವಿದ್ಯಾಲಯ ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದಲ್ಲಿ ಕಲಿಯುತ್ತಿದ್ದಾಗ ಡಾ. ಎಸ್.ಎಲ್. ಸಂಗಮ ಅವರು ಪ್ರಾಧ್ಯಾಪಕರಾಗಿದ್ದರು. ಸರ್ ಅವರ ಪ್ರೀತಿಯ ವಿದ್ಯಾರ್ಥಿಯಾಗಿದ್ದರು. ಸರ್ ಅವರು ಸುರೇಶ್ ಅವರಿಗೆ ಸದಾವಕಾಲ್ ಪ್ರೀತಿಯಿಂದ ಆಶೀರ್ವಾದ ಮಾಡುತ್ತಾ ಬಂದಿದ್ದಾರೆ. ಸದಾ ಒಳ್ಳೆಯದನ್ನೇ ಬಯಸುತ್ತಾ ಅವರ ಕಾರ್ಯಚಟುವಟಿಕೆಗಳಿಗೆ ಸಂತಸ ವ್ಯಕ್ತಪಡಿಸುತ್ತಾ, ಬೆಂಬಲ ನೀಡುತ್ತ ಬಂದಿದ್ದಾರೆ. ಸುರೇಶ ಅವರು ಸಹ ಗುರುಗಳಿಗೆ ಸದಾ ಶ್ರದ್ಧಾ, ಭಕ್ತಿಯಿಂದ ಗೌರವದಿಂದ ಕಾಣುತ್ತಾ ಬಂದಿದ್ದು, ಸದಾ ಗುರುಗಳು ನೀಡಿದ ಪ್ರೋತ್ಸಾಹ ವನ್ನು ಸ್ಮರಿಸುತ್ತಾರೆ.

# ಯುವಕರಿಗೆ ಉತ್ತಮ ಶಿಕ್ಷಣ ನೀಡಿದರೆ ಭವ್ಯ ಭಾರತ ನಿರ್ಮಾಣ ಸಾಧ್ಯ: ಶಾಸಕ ಲಕ್ಷ್ಮಣ ಸವದಿ ಅಭಿಮತ

**ಬೆಳಗಾವಿ ವಾರ್ತೆ ಅಥಣಿ :** ಅಥಣಿ ತಾಲೂಕಿನಲ್ಲಿ ಹೊಸ ಶೈಕ್ಷಣಿಕ ಬದಲಾವಣೆಯ ಕಾಲ ಆರಂಭವಾಗಿದ್ದು ನಮ್ಮ ವಿದ್ಯಾರ್ಥಿಗಳು ರಾಷ್ಟ್ರ ರಾಜ್ಯಮಟ್ಟದ ಹಲವು ಸಾಧನೆ ಮಾಡುತ್ತಿದ್ದು. ಪ್ರಾರ್ಥನಾ ಬಿರಾದರ ರಾಜ್ಯಕ್ಕೆ ಎಸೆಸೆಲ್ಸಿ ಪ್ರಥಮ ಸ್ಥಾನ ಪಡೆದರೆ, ಬಸವರಾಜ ಐಎ???ಸ್ ನಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಯುವಕರಿಗೆ ಉತ್ತಮ ಶಿಕ್ಷಣ ನೀಡಿದರೆ ಭವ್ಯ ಭಾರತ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಇದೇ ಉದ್ದೇಶದಿಂದ ಹಿಂದೆ ಕೆಲವೇ ಕೆಲವು ಖಾಸಗಿ ಸಂಸ್ಥೆಗಳಲ್ಲಿ ಮಾತ್ರ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿತ್ತು. ಬಡವರಿಗೆ ದುರ್ಬಲರಿಗೆ ಶಿಕ್ಷಣ ದೊರಕುವುದು ದುಸಾಧ್ಯವಾಗಿತ್ತು.ಶಿಕ್ಷಣ ಸುಲಭವಾಗಿ ದೊರಕಲಿ ಎಂಬ ಉದ್ದೇಶದಿಂದ ಅಂತಹ ತೊಂದರೆ ಜನಸಾಮಾನ್ಯರಿಗೆ ಆಗಬಾರದೆಂಬ ಉದ್ದೇಶದಿಂದ ಅಥಣಿ ಪಟ್ಟಣ ತೇಲಸಂಗ,ಕೋಕಟನೂರ ಗ್ರಾಮಗಳಲ್ಲಿ 3 ಪದವಿ ಕಾಲೇಜುಗಳನ್ನು ನಮ್ಮ ಕ್ಷೇತ್ರದಲ್ಲಿ ಆರಂಭಿಸಿದ್ದೇವೆ ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಅಥಣಿ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡುತ್ತಾ ಅಥಣಿ ಪ್ರಥಮ ದರ್ಜೆ ಕಾಲೇಜನ್ನು ಮೇಲ್ದರ್ಜೆಗೆ ಏರಿಸಲಾಗಿದ್ದು ರಾಜ್ಯದಲ್ಲಿ ಮಾದರಿ ಕಾಲೇಜು ಎಂದು ಆಯ್ಕೆಯಾಗಿದ್ದು ಉತ್ತಮ ಸೌಲಭ್ಯ ಪಡೆಯಲಿದೆ. ಆರಂಭಿಕ ವೇಳೆಯಲ್ಲಿ ನೂರರ ಸಂಖ್ಯೆಯಲ್ಲಿದ್ದ ವಿದ್ಯಾರ್ಥಿಗಳು ಇಂದು ಎರಡು ಸಾವಿರಕ್ಕುನಿಕ್ಕಿ ವಿದ್ಯಾರ್ಥಿಗಳು ಓದುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಇಲ್ಲಿನ ಹಲವು ವಿದ್ಯಾರ್ಥಿಗಳು ಯುನಿವರ್ಸಿಟಿ ಬ್ಲೂ ಆಗಿ ಅಲ್ಲದೆ ವಿವಿಧ ಕ್ಷೇತ್ರಗಳಲ್ಲಿ ಕೂಡ ಉತ್ತಮ ಸಾಧನೆ ಮಾಡಿದ್ದಾರೆ.



ಇದರ ಹಿಂದೆ ಇಲ್ಲಿನ ಪ್ರಾಧ್ಯಾಪಕರ ಶ್ರಮ ಅಪಾರವಾದದ್ದು. ಉತ್ತಮ ಶಿಕ್ಷಣ ದೊರೆಯುತ್ತಲಿರುವುದು ನಮ್ಮೆಲ್ಲರಿಗೂ ಕೂಡ ತುಂಬಾ ಸಂತಸ ತಂದಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಪದವಿ ಕಾಲೇಜು ಅಷ್ಟೇ ಅಲ್ಲದೆ ಸರಕಾರಿ ಪಿಯು ಕಾಲೇಜುಗಳನ್ನು ಕೂಡ ಪ್ರಾರಂಭ ಮಾಡಿದ್ದು ಒಕಟನೂರ್ ಕುಹಳ್ಳಿ ಸತಿಯಲ್ಲಿ ಕೆಪಿಎಸ್‌ಸಿ ಶಾಲೆ ಆರಂಭಿಸಿದ್ದೇವೆ. 11 ಪ್ರೌಢ ಶಾಲೆಗಳನ್ನು ಸ್ಥಾಪಿಸಿದ್ದೇವೆ. ಆಜಾದ್ ಹೆಸರಿನಲ್ಲಿ ಮಾದರಿ ಶಾಲೆ, ಸುಮಾರು ಎಂಟು ಎಕರೆ ಪ್ರದೇಶದಲ್ಲಿ ಕಾರ್ಮಿಕರ ಮಕ್ಕಳಿಗಾಗಿ ಮಾದರಿ ವಸತಿ ಶಾಲೆ ಭೂಮಿ ಪೂಜೆ ಮಾಡಲಾಗಿದ್ದು ಬರುವ ವರ್ಷದಿಂದ ಕಾರ್ಯಾರಂಭ ಮಾಡಲಿದೆ. ಮತಕ್ಷೇತ್ರದ 11 ಶಾಲೆಗಳಲ್ಲಿ ಎಲ್‌ಕೆಜಿಯಿಂದ ಇಂಗ್ಲಿಷ್ ಬೋಧನೆ ಆರಂಭಿಸಿದ್ದೇವೆ. ಈಗಾಗಲೇ ತಾಲೂಕಿನಲ್ಲಿ ರೈತರ ಮಕ್ಕಳಿಗೆ 185 ಕೋಟಿ ವೆಚ್ಚದಲ್ಲಿ ಪಶು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪಿಸಲಾಗಿದ್ದು ಕಾರ್ಯನಿರ್ವಹಿಸುತ್ತಿದೆ. 508 ಕೋಟಿ ವೆಚ್ಚದಲ್ಲಿ ಕೃಷಿ ಕಾಲೇಜು ಸ್ಥಾಪಿಸಲಾಗುತ್ತಿದೆ. ಕೇಂದ್ರೀಯ ವಿದ್ಯಾಲಯ ಕೂಡ ಸ್ಥಾಪಿಸಲಾಗುವುದು ಪಟ್ಟಣದಲ್ಲಿ ಈಗಾಗಲೇ ವಿದ್ಯಾರ್ಥಿಗಳ ನೋಂದಣಿ ಆರಂಭಿಸಲಾಗಿದೆ. ತಾಲೂಕಿನಲ್ಲಿ ಐಟಿಐ ಡಿಪ್ಲೋಮಾ ಜೊತೆಗೆ ಇಂಜಿನಿಯರಿಂಗ್ ಕಾಲೇಜ್ ಕೂಡ ಸ್ಥಾಪನೆಗೆ ಯತ್ನಿಸಲಾಗುವುದು.

ನಮ್ಮ ಕ್ಷೇತ್ರದ ಅಮಾಜೆಶ್ವರಿ ಕೊಟ್ಟಲಗಿ ಏತ ನೀರಾವರಿ ಹಾಗೂ ಬಸವೇಶ್ವರ ಏತ ನೀರಾವರಿ ಪ್ರತಿಶತ 97 ರಷ್ಟು ನೀರಾವರಿ ಆಗಲಿದ್ದು ಇದು ಹೆಮ್ಮೆಯ ಸಂಗತಿಯಾಗಿದೆ. ಬರುವ ದಿನಮಾನದಲ್ಲಿ ರಾಜ್ಯದಲ್ಲಿ ಅತಿ ಹೆಚ್ಚು ಕಬ್ಬು ಬೆಳೆಯುವ ತಾಲೂಕಿಂದು ಖ್ಯಾತಿ ಪಡೆಯಲಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ಈ ವೇಳೆ ತಹಸೀಲ್ದಾರ್ ಸಿದ್ರಾಯಿ ಬೋಸಗಿಯವರು ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ ವಿದ್ಯಾರ್ಥಿಗಳಿಗೆ ಅಥಣಿಯಲ್ಲಿ ಎಂದು ವಿದ್ಯಾರ್ಥಿಗಳಿಗೆ ಅಪಾರವಾಗಿರುವ ಅವಕಾಶಗಳಿದ್ದು ಸದ್ಬಳಕೆ ಮಾಡಿಕೊಂಡು ಜೀವನ ರೂಪಿಸಿಕೊಳ್ಳಬೇಕು. ಉತ್ತಮರ ಗೆಳೆತನ ಮಾಡುವ ಮೂಲಕ ವಿದ್ಯಾರ್ಥಿಗಳು ತಮ್ಮ ಭವ್ಯ ಬದುಕನ್ನು ಸಾರ್ಥಕ ಪಡಿಸಿಕೊಳ್ಳ ಬೇಕೆಂದು ಕಿವಿಮಾತು ಹೇಳಿದರು.

ಇನ್ನೋರ್ವ ಅತಿಥಿಯಾಗಿ ಪಾಲ್ಗೊಂಡ ಜಮಖಂಡಿ ಮಹಿಳಾ ಪ್ರಥಮ ದರ್ಜೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಯಶವಂತ ಕೊಕ್ಕನವರ ವಿಶೇಷ ಉಪನ್ಯಾಸ ನೀಡುತ್ತಾ ವಿದ್ಯಾರ್ಥಿಗಳು ಆಗದು ಎಂದು ಕೈ ಚೆಲ್ಲಿ ಕೂಡದೆ ಎಲ್ಲವೂ ಸಾಧ್ಯ ಎನ್ನುವ ಸಕಾರಾತ್ಮಕ ಧೋರಣೆಯನ್ನು ತಾಳಿ ನಿಮ್ಮ ಗುರುಗಳ ಮಾರ್ಗದರ್ಶನದಲ್ಲಿ ಅನುಮಾನ, ಅವಮಾನದ ನಂತರ ಬಹುಮಾನ ಪಡೆಯುವ ಸಾಧನೆ ಸಾಧ್ಯವಾಗುವುದು. ಮೊಬೈಲ್ ಟಿವಿಗಳನ್ನು ಬಿಟ್ಟು, ಪ್ರೀತಿ ಪ್ರೇಮದ ಹುಚ್ಚನ್ನು ಬಿಟ್ಟು, ನಿರಂತರ ಓದಿನೆಡೆಗೆ ಗಮನ ಹರಿಸಿ ಸನಾತನ ಸಂಸ್ಕೃತಿಯನ್ನು ರೂಢಿಸಿಕೊಂಡು ತಂದೆ ತಾಯಿಯ ಸೇವೆ ಮಾಡಿ ಉತ್ತಮ ನಾಗರಿಕರಾಗಿ ಬಾಳಿ ಎಂದು ಕಿವಿಮಾತು ಹೇಳಿದರು . ಈ ವೇಳೆ ಪ್ರೊ ರಾಜು ಭಜಂತ್ರಿ ಸಂಪಾದಕತ್ವದಲ್ಲಿ ಸಿದ್ಧವಾದ ಮಹಾವಿದ್ಯಾಲಯದ ಸ್ಮರಣ ಸಂಚಿಕೆ' ಜ್ಞಾನ ದೀಪ "ವನ್ನು ಶಾಸಕರು ಬಿಡುಗಡೆ ಮಾಡಿದರು.

ಈ ವೇಳೆ ಮಹಾವಿದ್ಯಾಲಯದ ಪ್ರಾಂಶುಪಾಲ ವಿಲಾಸ್ ಕಾಂಬಳೆ ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದರು. ಈ ವೇಳೆ ಶೈಕ್ಷಣಿಕ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ದಿವಾನಮಳ ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿ ಆಡಿದರು. ಡಾ ಆರ್ ಎ ಬಡಿಗೇರ ಅತಿಥಿ ಪರಿಚಯಿಸಿದರು. ವೇದಿಕೆಯಲ್ಲಿ ಐಕ್ಯೂ ಎಸಿ ಸಂಯೋಜಕ ಜಿನೇಂದ್ರ ಬಣಜವಾಡ, ಸಿಬ್ಬಂದಿ ಕಾರ್ಯದರ್ಶಿ ಡಾ ಶಾಂತಿನಾಥ ಬಳೋಜ, ಸಾಂಸ್ಕೃತಿಕ ಕಾರ್ಯದರ್ಶಿ ಉಂಡಾಡಿ ಸಂತೋಷ್, ಕ್ರೀಡಾ ಕಾರ್ಯದರ್ಶಿ ಡಾ.ಸುರೇಶ ತಕತರಾವ, ಡಾ ಮಹಾಂತೇಶ ಉಕ್ಕಲಿ ಶೈಕ್ಷಣಿಕ ಅಭಿವೃದ್ಧಿ ಸಮಿತಿಯ ಸದಸ್ಯರು ಮಹಾವಿದ್ಯಾಲಯದ ಪ್ರಾಧ್ಯಾಪಕ ಬಂಧು ಭಗಿನಿಯರು, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಉಪನ್ಯಾಸಕರಾದ ಡಾ. ಆರ್ ಎಸ್ ದೊಡ್ಡ ನಿಂಗಪ್ಪಗೋಳ ಹಾಗೂ ಪ್ರೊ ಕವಿತಾ ಘಟಕಾಂಬಳೆ ನಿರೂಪಿಸಿದರು, ಪ್ರೋ ಅನಿಷಾ ನಿಡೋಣಿ ವಂದಿಸಿದರು.

# ಲಕ್ಕುಂಡಿಯನ್ನು ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿಸಲು ಸಚಿವ ಎಚ್.ಕೆ. ಪಾಟೀಲ ಸೂಚನೆ



**ಬೆಳಗಾವಿ ವಾರ್ತೆ ಬೆಂಗಳೂರು/ಗದಗ:** "ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಪುರಾತತ್ವ ವೈಭವವನ್ನು ಒಳಗೊಂಡಿರುವ ಲಕ್ಕುಂಡಿಯನ್ನು ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿ ರೂಪಿಸುವ ದಿಸೆಯಲ್ಲಿ ಸಮಗ್ರ ಯೋಜನೆಗಳೊಂದಿಗೆ ಕಾರ್ಯನಿರ್ವಹಿಸಬೇಕು" ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಸಭೆಯು ಶನಿವಾರ ಬೆಂಗಳೂರಿನ ವಿಧಾನಸೌಧದ ಕೊಠಡಿ ಸಂಖ್ಯೆ 106ರಲ್ಲಿ ಸಚಿವ ಎಚ್.ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಮಾತನಾಡಿದ ಸಚಿವ ಎಚ್ ಕೆ ಪಾಟೀಲರು, ಲಕ್ಕುಂಡಿಯ ಪುರಾತತ್ವ ಸಂಪತ್ತಿನ ಸಂರಕ್ಷಣೆ, ದೇವಾಲಯಗಳ ಪುನರುಜ್ಜೀವನ, ಪುರಾತನ ಬಾವಿಗಳ ಅಭಿವೃದ್ಧಿ ಹಾಗೂ ಪ್ರವಾಸೋದ್ಯಮಕ್ಕೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಕಾಯರ್ಗಳನ್ನು ಸಮನ್ವಯದಿಂದ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

"ಗದಗ ಜಿಲ್ಲೆಯ ಲಕ್ಕುಂಡಿಯಲ್ಲಿ ಈಗಾಗಲೇ 15 ಬಾವಿ ಹಾಗೂ 15 ದೇವಾಲಯಗಳನ್ನು ಸಾರ್ವಜನಿಕರಿಗೆ ಪರಿಚಯಿಸಲಾಗಿದೆ. ಕಾಲಕ್ರಮೇಣ ನಿರ್ಲಕ್ಷ್ಯಕ್ಕೆ ಒಳಗಾಗಿ ತಮ್ಮ ಗುರುತನ್ನು ಕಳೆದುಕೊಂಡಿದ್ದ ಅನೇಕ ಪಾರಂಪರಿಕ ತಾಣಗಳನ್ನು ಸರ್ಕಾರ ಮತ್ತು ಸ್ಥಳೀಯರ ಸಹಕಾರದಿಂದ ಮರು ಅನಾವರಣಗೊಳಿಸುವ ಕಾರ್ಯ ಯಶಸ್ವಿಯಾಗಿ ನಡೆಯುತ್ತಿದೆ" ಎಂದು ಹೇಳಿದರು.

2026 ಅತ್ಯದೊಳಗೆ ಕನಿಷ್ಠ 50 ಬಾವಿ ಹಾಗೂ 50 ದೇವಾಲಯಗಳನ್ನು ಗುರುತಿಸುವ, ಲಕ್ಕುಂಡಿಯ ಪಾರಂಪರಿಕ ತಾಣಗಳ ಸಂಖ್ಯೆಯನ್ನು 100ರ ಗಡಿಗೆ ತಲುಪಿಸುವ ಗುರಿ ಹೊಂದಲಾಗಿದೆ. ಈ ಮಹತ್ವಾಕಾಂಕ್ಷಿ ಯೋಜನೆ ಸಾಕಾರಕ್ಕೆ ಸ್ಥಳೀಯರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಸಚಿವ ಎಚ್ ಕೆ ಪಾಟೀಲರು ನುಡಿದರು.

ಲಕ್ಕುಂಡಿಯಲ್ಲಿ ಬಾವಿ, ದೇವಾಲಯಗಳಿವೆ ಎಂದು ಇತಿಹಾಸದಲ್ಲಿ ತಿಳಿಸಿದ್ದು, ಅವುಗಳನ್ನು ಹೆಕ್ಕಿ ತೆಗೆಯುವ ಕಾರ್ಯವು ಪ್ರಾಧಿಕಾರದಿಂದ ಆಗಲಿ, ಈ ದಿಶೆಯಲ್ಲಿ ಅಧಿಕಾರಿಗಳು ಹಾಗೂ ಪ್ರಾಧಿಕಾರದ ಸದಸ್ಯರು ಕಾರ್ಯ ಪ್ರವೃತ್ತರಾಗಲಿ ಎಂದು ಸಚಿವರು ತಿಳಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, "ಎರಡು ಸಾವಿರ ವರ್ಷಗಳ ಇತಿಹಾಸವನ್ನು ಹೊತ್ತಿರುವ ಲಕ್ಕುಂಡಿಯ ಪುರಾತತ್ವ ಸಂಪತ್ತು ಇಂದಿನ ಪೀಳಿಗೆಗೆ ಅಚ್ಚರಿಯ ಸಂಗತಿಯಾಗಿದೆ. ಆ ಕಾಲದ ಶಿಲ್ಪಿಗಳ ಪ್ರತಿಭೆ, ಕಲಾತ್ಮಕತೆ ಮತ್ತು ತಾಂತ್ರಿಕ ಸಾಮರ್ಥ್ಯಕ್ಕೆ ಇಲ್ಲಿ ದೊರೆಯುತ್ತಿರುವ ಶಿಲ್ಪಗಳು ಹಾಗೂ ಪುರಾವೆಗಳು ಜೀವಂತ ಸಾಕ್ಷಿಗಳಾಗಿವೆ" ಎಂದು ಹೇಳಿದರು.

"ಸಚಿವ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ನಡೆಯುತ್ತಿರುವ ಅನ್ವೇಷಣಾ ಕಾರ್ಯಗಳಿಂದ ಲಕ್ಕುಂಡಿಯ ಐತಿಹಾಸಿಕ ಮಹತ್ವ ಮತ್ತಷ್ಟು ಬೆಳಕಿಗೆ ಬರುತ್ತಿದೆ. ಈಗ ಪತ್ತೆಯಾಗಿರುವ ಪುರಾವೆಗಳು ಕೇವಲ ಆರಂಭ ಮಾತ್ರ. ಇನ್ನಷ್ಟು ಅನ್ವೇಷಣೆಗಳು ನಡೆದರೆ ಲಕ್ಕುಂಡಿಯ ಗತ ವೈಭವ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಸಾಧ್ಯತೆ ಇದೆ" ಎಂದು ಅವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ರಾಜ್ಯ ಮಟ್ಟದ ಸಲಹಾ ಸಮಿತಿ ಸದಸ್ಯರು ಲಕ್ಕುಂಡಿಯ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಸಲಹೆಗಳು ಮತ್ತು ಅಭಿಪ್ರಾಯಗಳನ್ನು ಮಂಡಿಸಿದರು. ಪಾರಂಪರಿಕ ತಾಣಗಳ ಸಂರಕ್ಷಣೆ, ಪ್ರವಾಸೋದ್ಯಮ ವಿಸ್ತರಣೆ, ಸ್ಥಳೀಯ ಕಲಾ ಪರಂಪರೆಯ ಉತ್ತೇಜನ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಬೇಕೆಂದು ಸದಸ್ಯರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ರಾಜ್ಯ ಮಟ್ಟದ ಸಲಹಾ ಸಮಿತಿ ಸದಸ್ಯರಾದ ಸಿ.ಜಿ. ಬೆಟಸೂರಮಠ, ಸಿದ್ದಲಿಂಗೇಶ್ವರ ಎಚ್. ಪಾಟೀಲ, ಶ್ರೀಮತಿ ಗೀತಾಂಜಲಿ ರಾವ್, ಅ.ದ. ಕಟ್ಟಿಮನಿ, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕ್ ಚಂದ್ರ, ಪುರಾತತ್ವ, ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಆಯುಕ್ತ ದೇವರಾಜ್ ಎ., ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ರೀ ಹುರಕಡ್ಲಿ ಅಜ್ಜನವರ ಜಯಂತಿ ಮಹೋತ್ಸವ



**ಬೆಳಗಾವಿ ವಾರ್ತೆ ನವಲಗುಂದ:** "ಶ್ರೀ ಹುರಕಡ್ಲಿ ಅಜ್ಜನವರು ಕಲಿಯುಗದ ಕಲ್ಪವೃಕ್ಷವಿದ್ದ ಹಾಗೆ. ಮನಸ್ಸಿನಿಂದ ಬೇಡಿಕೊಂಡ ಪ್ರತಿಯೊಬ್ಬ ಭಕ್ತರ ಇಷ್ಟಾರ್ಥಗಳನ್ನು ತಮ್ಮ ಆಶೀರ್ವಾದದ ಮೂಲಕ ಈಡೇರಿಸುತ್ತಾ ಬಂದಿದ್ದಾರೆ" ಎಂದು ಮಾಜಿ ಸಚಿವ ಶಂಕರ ಪಾಟೀಲ ಮುನೇನಕೊಪ್ಪ ಹೇಳಿದರು.

ಪಟ್ಟಣದ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಹುರಕಡ್ಲಿ ಅಜ್ಜನವರ 125ನೇ ಜಯಂತಿ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಹುರಕಡ್ಲಿ ಅಜ್ಜನವರು ಸಮಾಜಕ್ಕೆ ಬೆಳಕಿನಂತಿದ್ದಾರೆ. ಅವರ ಸ್ಮರಣೆ ಮಾಡುವುದರಿಂದಲೇ ಮನಸ್ಸಿಗೆ ಅಪಾರ ನೆಮ್ಮದಿ ಸಿಗುತ್ತದೆ" ಎಂದ ಅವರು, ಇದೇ ಸಂದರ್ಭದಲ್ಲಿ ಜಾನಕಿ ಬ. ತಡಹಾಳ ಅವರು ಬರೆದ "ನನ್ನ ಅಜ್ಜ" ಎಂಬ ಪುಸ್ತಕವನ್ನು ಉಲ್ಲೇಖಿಸಿ, "ಈ ಕೃತಿ ಇಂದಿನ ಯುವ ತಲೆಮಾರಿಗೆ ಅತ್ಯಂತ ಉಪಯೋಗಕಾರಿಯಾಗಿದೆ" ಎಂದು ಆಶಿಸಿದರು.

ಇದೆ ವೇಳೆ "ನನ್ನ ಅಜ್ಜ" ಎಂಬ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಣ್ಣಪ್ಪ ಭಾಗಿ ವಹಿಸಿದ್ದರು. ವೇದಿಕೆಯಲ್ಲಿ ಹಿರಿಯ ನ್ಯಾಯವಾದಿ ವಿ.ಜಿ. ಪಾಟೀಲ, ಅಂಬಲಿ ವಕೀಲರು, ಬಿ.ಎಂ. ಹುರಕಡ್ಲಿ, ಎಂ ವ್ಹಿ ಹೊಳೆಯಣ್ಣನವರ ಸೇರಿದಂತೆ ಊರಿನ ಪ್ರಮುಖರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.



ಅಧಿಕ ಮಾಸದ ಪ್ರಯುಕ್ತ ನಗರದ ತೊರವಿ ಗಲ್ಲಿಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ದೊಡ್ಡ ಗೌರಿಯನ್ನು ಸಂಕಲ್ಪದೊಂದಿಗೆ ಕೂಡ್ರಿಸಲಾಯಿತು. ಈ ಸಂದರ್ಭದಲ್ಲಿ ಭಗವದ್ಗೀತಾ ಭಜನಾ ಮಂಡಳಿಯ ಅಧ್ಯಕ್ಷೆ ಶ್ರೀಮತಿ ಸುರೇಖಾ ಕುಲಕರ್ಣಿ, ಪರಿಮಳಾ ವಾಳ್ವೇಕರ, ಎನ್ ಲಕ್ಷೀ, ವಿದ್ಯಾ ಜಕಾತಿ, ವಾಣಿ ಕಂಭಾಗಿ, ಭಾರತಿ ನಾಯಕ, ಶ್ರಾವಣಿ ಮಳಗಿ, ಪಂಡಿತ ನರಹರಿ ಆಚಾರ್ಯ ವಾಳ್ವೇಕರ, ಆರ್.ಆರ್.ಕುಲಕರ್ಣಿ, ನಾಗರಾಜ ಕಟ್ಟಿ, ಸುಶಿಲೇಂದ್ರ ಸುಬ್ಬಣ್ಣನವರ, ವಾದಿರಾಜ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

# ನೀರಿನ ಟ್ಯಾಂಕಿಗೆ ಅಧಿಕಾರಿಗಳ ಭೇಟಿ

**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ತಾಲೂಕಿನ ಬೈಲೂರ ಗ್ರಾಮದ ಹುತಾತ್ಮ ಗಾಂಧಿ ಮಾರ್ಗದಲ್ಲಿರುವ ಜಲ ಸಂಗ್ರಹಾಲಯ (ನೀರಿನಟ್ಯಾಂಕ್) 3 ದಶಕಗಳ ಹಿಂದೆ ನಿರ್ಮಾಣವಾಗಿತ್ತು ಈಗ ಇದು ಶಿಥಿಲಾವಸ್ಥೆಯಲ್ಲಿದೆ ಇದನ್ನು ಸಿಮೆಂಟ್ ಪ್ಲಾಸ್ಟರ ಮಾಡಲಾಗಿತ್ತು ಅದು ಹಾಳಾಗಿದೆ. ಅದನ್ನು ಸಂಪೂರ್ಣ ಕಿತ್ತೆಸೆದು ಹೊಸ ಟ್ಯಾಂಕ್ ನಿರ್ಮಿಸಿ ಕೊಡಬೇಕೆಂದು ಗ್ರಾಮಸ್ಥರು ಅಧಿಕಾರಿಗಳನ್ನು ಒತ್ತಾಯಿಸಿದ್ದರು.

ಇದರ ಹಿನ್ನೆಲೆ ಸದರಿ ವಿಷಯದ ಕುರಿತು ಕಾರ್ಯಪಾಲಕ ಅಭಿಯಂತರರು ಗ್ರಾ.ಕು.ನೀ ನೈರ್ಮಲ್ಯ ಬೆಳಗಾವಿ ವಿಭಾಗದ ಕಿರಣ ಗೋರ್ಪಡೆ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಗ್ರಾ.ಕು.ನೀ & ನೈರ್ಮಲ್ಯ ಬೈಲಹೊಂಗಲ ಉಪವಿಭಾಗಾಧಿಕಾರಿ ಅಜೀತ ಬೀರಾದರ ಸ್ಥಾನಿಕ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸದರಿ ಜಲ ಸಂಗ್ರಹಾಲಯ ಸುಸ್ಥಿತಿಯಲ್ಲಿ ಇರುವುದು ಆರ್.ಎಚ್. ಟೆಸ್ಟ್ ತಿಳಿಯಲಾಗಿ, ತಾತ್ಕಾಲಿಕ ದುರಸ್ತಿ ಮಾಡಲು ಸೂಚಿಸಿದರು.

ಈ ವೇಳೆ ಪಿಡಿಓ ಈಶ್ವರ ಹಡಪದ, ಕಾರ್ಯದರ್ಶಿ ಬಸವರಾಜ ಅಂಬಡಗಟ್ಟಿ,



ಶಿವು ಹಿರೇಮಠ, ಶಶಿಧರ ಗಂಡಲಾಟಿ, ಸುನೀಲ್ ಇಟ್ನಾಳ, ಅಭಿಯಂತರ ಚಂದರಕಾಂತ ಅನಗೊಂಡ, ಸಂಬಂಧಿಸಿದ ಶಾಖಾಧಿಕಾರಿಗಳು, ಗ್ರಾಪಂ ಸಿಬ್ಬಂದಿ, ಗ್ರಾಮಸ್ಥರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001